ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issue : 152 | ದಿನಾಂಕ : 02-04-2026 ಗುರುವಾರ Date : 02-04-2026 Thursday | RNI: Karkan/20223/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2




ಮುಸ್ಲಿಂರನ್ನು ಕಡೆಗಣಿಸುತ್ತಿರುವ ಕಾಂಗ್ರೆಸ್ ಪಕ್ಷ: ರವಿ ಬೋಸರಾಜ ಹಿಟ್ಲರ್‌ನಂತೆ ವರ್ತನೆ

# ರಾಯಚೂರು ವಿಧಾನಸಭಾ ಕ್ಷೇತ್ರದಲ್ಲೂ ಮುಸ್ಲಿಂರಿಗೆ ಟಿಕೇಟ್ ತಪ್ಪಿಸುವ ಹುನ್ನಾರ-ಬಷೀರುದ್ದೀನ್ ಆರೋಪರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.1**-ದಾವಣಗೆರೆ ಉಪ ಚುನಾವಣೆಯಲ್ಲಿ ಮುಸ್ಲಿಂ ಸಮೂದಾಯಕ್ಕೆ ಟಿಕೇಟ್ ಕೈ ತಪ್ಪಿರುವದು ನೋವಿನ ಸಂಗತಿ. ಕಾಂಗ್ರೆಸ್ ಮುಸ್ಲಿಂರನ್ನೂ ಓಟ ಬ್ಯಾಂಕ್‌ಗೆ ಮಾತ್ರ ಸೀಮಿತಗೊಳಿಸುವದನ್ನು ಮುಂದುವರೆಸಿದರೆ ಭಾರಿ ಬೆಲೆ ತೆರಬೇಕಾಗುತ್ತದೆ. ರಾಯಚೂರು ವಿಧಾನಸಭಾ ಕ್ಷೇತ್ರದಲ್ಲಿಯೂ ಮುಸ್ಲಿಂ ಸಮುದಾಯಕ್ಕೆ ಟಿಕೇಟ್ ತಪ್ಪಿಸುವ ಹುನ್ನಾರ ರವಿ ಭೋಸರಾಜರಿಂದ ನಡೆಯುತ್ತಿದೆ. ಅವರು ಹಿಟ್ಲರ್‌ನಂತೆ ಕೆಲಸ ಮಾಡುತ್ತಿದ್ದಾರೆ ಎಂಬ ಗಂಬೀರ ಆರೋಪವನ್ನು ಕಾಂಗ್ರೆಸ್ ಮುಖಂಡ ಹಾಗೂ ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಬಷೀರುದ್ದೀನ್ ಮಾಡಿದ್ದಾರೆ.



ಅವರಿಂದು ಮಾಧ್ಯಮಗಳೊಂದಿಗೆ ಮಾತನಾಡಿ ದಾವಣೆಗೆರೆಯಲ್ಲಿ ದಿವಂಗತ ಶಾಮನೂರು ಶಿವಶಂಕರಪ್ಪ ಇವರು ಮುಸ್ಲಿಂ ಸಮೂದಾಯಕ್ಕೆ ಟಿಕೇಟ್ ನೀಡಬೇಕನ್ನು ಬಯಕೆ ಹೊಂದಿದ್ದರು. ಮುಸ್ಲಿಂ ಸಮೂದಾಯ ನಾಯಕರುಗಳಾದ ಸಚಿವ ಜಮೀರ್ ಅಹ್ಮದ ಸೇರಿದಂತೆ ಅನೇಕ ನಾಯಕರುಗಳು ದಾವಣೆಗೆರೆ ಉಪ ಚುನಾವಣೆಗೆ ಮುಸ್ಲಿಂ ಸಮೂದಾಯಕ್ಕೆಟಿಕೇಟ್ ನೀಡಬೇಕೆನ್ನುವ ಮನವಿಯನ್ನು ಪಕ್ಷದ ಮುಖಂಡರಿಗೆ ಮಾಡಿದ್ದರು. ಆದರೆ ಎಐಸಿಸಿ ಕಾರ್ಯದರ್ಶಿ ಸುರ್ಜೆವಾಲ್ ಇವರು ಸಮಾಜದ ಗುರುಗಳಿಗೆ ಟಿಕೇಟ್ ಕೇಳಿದ್ದರಿಂದ ಅಪಮಾನಿಸಿದ್ದಾರೆ. ದಾವಣೆಗೆರೆ ಮಾತ್ರವಲ್ಲ. ಎಲ್ಲ ಸಮೂದಾಯಗಳನ್ನು ಪಕ್ಷ ಗೌರವಿಸಬೇಕು. ಮುಸ್ಲಿಂ ಸಮುದಾಯಕ್ಕೆ ಟಿಕೇಟ್ ನೀಡುವಾಗ ಮಾತ್ರ ಕಾಂಗ್ರೆಸ್ ನಾಯಕರು ಕುಟುಂಬ ರಾಜಕಾರಣಕ್ಕೆ ಮಣೆ ಹಾಕಿದ್ದಾರೆ. ಅತಿಹೆಚ್ಚು ಜನಸಂಖ್ಯೆ ಹೊಂದಿರುವ ಸಮೂದಾಯಕ್ಕೆ ಅನ್ಯಾಯವಾಗಿರುವದು ನೋವು ತಂದಿದೆ. ಸಾಮಾಜಿಕ ನ್ಯಾಯ, ಸರ್ವರಿಗೂ ಸಮ ಪಾಲು ಎಂದು ಹೇಳುವಾಗ ಮುಸ್ಲಿಂ ಸಮೂದಾಯಕ್ಕೆ ಉದ್ದೇಶ ಪೂರಕವಾಗಿ ರಾಜಕೀಯ ಅಧಿಕಾರ ತಪ್ಪಿಸುವ ಕೆಲಸ ನಡೆಯುತ್ತಿದೆ. ಪಕ್ಷ ನಾಯಕರೇ ಸಮಾಜಕ್ಕೆ ಅನ್ಯಾಯವಾದರೂ ಸರಿಪಡಿಸದೇ ಇರುವದಿರಂದ ಪಕ್ಷದಲ್ಲಿ ಮುಸ್ಲಿಂರು ಉಳಿಯಬೇಕೋ ಬೇಡವೋ ಎನ್ನುವ ಕುರಿತು ಯೋಚಿಸಬೇಕಿದೆ. ಬೇರೆ ರಾಜ್ಯದಿಂದ ಬಂದುವರನ್ನು ರಾಜ್ಯ ಉಸ್ತುವಾರಿ ಮಾಡಿದರರೆ ಸ್ಥಳೀಯ ಸಮಸ್ಯೆ, ಜನರ ಆಶಯಗಳನ್ನು ಅರ್ಥಮಾಡಿಕೊಳ್ಳಲು ಆಗುವದಿಲ್ಲ. ಮುಸ್ಲಿಂ ಸಮೂದಾಯಕ್ಕೆ ಆಗುತ್ತಿರುವ ಅನ್ಯಾಯ ವಿರುದ್ದ ಉಪ ಚುನಾವಣೆಗಳ ನಂತರ ಎಐಸಿಸಿ ಅಧ್ಯಕ್ಷರು ಮತ್ತು ರಾಹುಲಗಾಂಧೀಜಿಯವರ ಗಮನಕ್ಕೆ ತರುವ ಕುರಿತು ಚರ್ಚಿಸಲಾಗುತ್ತದೆ ಎಂದರು. ➘ 2

## ಹಾವೇರಿ: ಪ್ಲಾಟ್‌ಫಾರ್ಮ್‌ಗೆ ನುಗ್ಗಿ ಜನರಿಗೆ ಬಸ್ ಡಿಕ್ಕಿ; ಮಗು ಸಾವು, ಮೂವರಿಗೆ ಗಾಯ

**ಹಾವೇರಿ,ಏ.1**-ನಿಲುಗಡೆ ವೇಳೆ ವೇಗವಾಗಿ ಬಂದ ವಾಯವ್ಯ ಕರ್ನಾಟಕ ಸಾರಿಗೆ ಬಸ್ ನಿಲ್ದಾಣದ ಪ್ಲಾಟ್‌ಫಾರ್ಮ್ ಮೇಲ್ ಹತ್ತಿ, ಅಲ್ಲಿದ್ದ ಜನರಿಗೆ ಡಿಕ್ಕಿ ಹೊಡೆದು 2 ವರ್ಷದ ಬಾಲಕ ಸಾವನ್ನಪ್ಪಿ, ಇತರ ಮೂವರು ಗಾಯಗೊಂಡಿದ್ದಾರೆ. ಹಾವೇರಿ ಕೇಂದ್ರ ಬಸ್ ನಿಲ್ದಾಣದಲ್ಲಿ ಸೋಮವಾರ ಬೆಳಗ್ಗೆ ದುರ್ಘಟನೆ ಸಂಭವಿಸಿತು.

ಬಸ್ ಡಿಕ್ಕಿಯಾಗಿ ಗಾಯಗೊಂಡ ಎರಡು ವರ್ಷದ್ ಮಗು ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದೆ.

ಮೃತಪಟ್ಟ ಮಗುವನ್ನು ಸವಣೂರು ಪಟ್ಟಣದ ಹಜರತ್ ಅಲಿ ಎಂದು ಗುರುತಿಸಲಾಗಿದೆ.

ಇನ್ನುಳಿದ ಮೂವರು ಗಾಯಾಳುಗಳಾದ ವಾಸುದೇವ (44), ಹರ್ಷಾ (6) ಹಾಗೂ ಕಾವ್ಯಾಂಜಲಿ (39) ಎಂಬವರಿಗೆ ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇವರೆಲ್ಲರೂ ಬಂಕಾಪುರ ಪಟ್ಟಣದ ನಿವಾಸಿಗಳು. ➘ 2

## ವೋಟರ್ ಲಿಸ್ಟ್‌ನಿಂದ ತಪ್ಪಾಗಿ ಕೈಬಿಟ್ಟಿರುವುದನ್ನು ಸರಿಪಡಿಸಬಹುದು ಮತದಾನದ ಹಕ್ಕನ್ನು ರದ್ದು ಮಾಡಲು ಸಾಧ್ಯವಿಲ್ಲ: ಸುಪ್ರೀಂ ಕೋರ್ಟ್

**ನವದೆಹಲಿ,ಏ.1**-ಒಬ್ಬ ವ್ಯಕ್ತಿಯನ್ನು ಮತದಾರರ ಪಟ್ಟಿಯಿಂದ ಹೊರಗಿಡಲಾಗಿದ್ದರೆ ಅಥವಾ ಅವರಿಗೆ ಮತ ಚಲಾಯಿಸಲು ಸಾಧ್ಯವಾಗದಿದ್ದರೂ, ನ್ಯಾಯಮಂಡಳಿಯ ಪರಿಶೀಲನೆಯಲ್ಲಿ ನ್ಯಾಯ ಸಮ್ಮತವಲ್ಲ ಎಂದು ಕಂಡು ಬಂದರೆ ಅದನ್ನು ಸರಿಪಡಿಸಬಹುದಾಗಿದೆ ಎಂದು ಸುಪ್ರೀಂ ಕೋರ್ಟ್ ಬುಧವಾರ ಹೇಳಿದೆ. ನ್ಯಾಯಮಂಡಳಿ ನಿರ್ಧಾರವನ್ನು ಸ್ವಯಂಚಾಲಿತವಾಗಿ ಸೇರಿಸಬೇಕು ಎಂದು ನಾವು ಸೂಚಿಸುತ್ತಿಲ್ಲ ಎಂದು ಪೀಠ ಇದೇ ವೇಳೆ ಸ್ಪಷ್ಟಪಡಿಸಿದೆ. ಆದರೆ, ತೀರ್ಪುಗಳು ಕಟ್-ಆಫ್ ಮೀರಿ ವಿಸ್ತರಿಸಿದಲ್ಲಿ ಪೂರಕ ಪಟ್ಟಿಯಲ್ಲಿ ಸೇರಿಸುವುದು ಕಾರ್ಯಸಾಧ್ಯವಾಗದಿರಬಹುದು. ಅಂತಹ ➘ 2

## ಜನಗಣತಿ: ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳಿಸಲು ಎಲ್ಲರ ಸಹಕಾರ ಅಗತ್ಯ -ಜೋಬಿನ್ ಮಹೋಪಾತ್ರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.1**-ಜನಗಣತಿ ಎಂಬುವುದು ದೇಶದ ಅಭಿವೃದ್ಧಿ, ಪ್ರಗತಿ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವ ಬುನಾದಿಯಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹೋಪಾತ್ರ ಹೇಳಿದರು.

ಅವರಿಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಹಾನಗರ ಪಾಲಿಕೆಯಿಂದ ಹಮ್ಮಿಕೊಂಡಿದ್ದ ಭಾರತದ ಜನಗಣತಿ 2027ರ ಅಂಗವಾಗಿ ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ ಮೊದಲನೇ ಹಂತದ ತರಬೇತಿ ಕಾರ್ಯಗಾರವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಗಣತಿಯೆಂಬುವುದು ಸರ್ಕಾರದ ಒಂದು ಕಾರ್ಯಚಟುವಟಿ ಕೆಯಲ್ಲ. ಇದು ದೇಶದ ಸಮಗ್ರ ಅಭಿವೃದ್ಧಿಗೆ ➘ 2

## ಕಾರ್ಮಿಕ ಸಂಹಿತೆ ರದ್ದುಪಡಿಸಲು ಆಗ್ರಹಸಿ ಕಪ್ಪು ಪಟ್ಟಿ ಧರಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಪ್ರತಿಭಟನೆ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.1**-ನಾಲ್ಕು ಕಾರ್ಮಿಕ ಸಂಹಿತೆಗಳಿಗೆ ಕೇಂದ್ರ, ಸರ್ಕಾರ ನಿಯಮಗಳನ್ನು ಜಾರಿಗೆ ತರುತ್ತಿರುವುದನ್ನು ವಿರೋಧಿಸಿ ಕಾರ್ಮಿಕ ಸಂಘಗಳ ಜಂಟಿ ಸಮಿತಿಯಿಂದ ಕರಾಳ ದಿನ ಆಚರಣೆ ಮೂಲಕ ಪ್ರತಿಭಟನೆ ನಡೆಸಲಾಯಿತು.

ಕೇಂದ್ರ, ಸರ್ಕಾರ ಕಾರ್ಮಿಕ ಸಂಹಿತೆಗಳಿಗೆ ನಿಯಮಗಳನ್ನು ಜಾರಿಗೊಳಿಸುತ್ತಿರುವುದನ್ನು ಖಂಡಿಸಿದರು. 4 ಕಾರ್ಮಿಕ ಸಂಘಟನೆಗಳಲ್ಲಿ ಸಂಘಟನೆಗೆ ಕಠಿಣ ನಿಯಮಗಳು, ಹೇರುವುದು, ನೋಂದಣಿ ಕಷ್ಟಕರ ಅಲ್ಲದೆ ರದ್ದತಿ ಸುಲಭವಾಗಲಿದೆ, ಉದ್ಯೋಗದಾತರ ಕಾನೂನುಗಳ ಉಲ್ಲಂಘನೆಗಳನ್ನು ಅಪರಾಧವಲ್ಲದಂತೆ ಮಾಡುವುದಾಗಿದೆ ಇದರ ಉದ್ದೇಶವಾಗಿದ್ದು ವಿರೋಧ ವ್ಯಕ್ತಪಡಿಸಿದರು.

ಈ ನಿಯಮಗಳಿಂದ ಕಾರ್ಮಿಕ ಸಂಘಟನೆಗಳ ಚಟುವಟಿಕೆಗಳನ್ನು ಅಪರಾಧೀಕರಣ ಎಂದು ➘ 2

## ಮಂತ್ರಾಲಯದಲ್ಲಿ ಕಾಣಿಕೆ ಹುಂಡಿ ಏಣಿಕೆ 21 ದಿನದಲ್ಲಿ 2 ಕೋಟಿ ರೂ ಅಧಿಕ ಹಣ ಸಂಗ್ರಹ

**ರಾಯಚೂರು,ಏ.1**-ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿ ಮಠದ ಮಾರ್ಚ್ ತಿಂಗಳಿನ 21 ದಿನದ ಕಾಣಿಕೆ ಹುಂಡಿ ಎಣಿಕೆ ಮುಕ್ತಾಯವಾಗಿದ್ದು, ಕಳೆದ 21 ದಿನದಲ್ಲಿ 2,48,28,737 ರೂ. ಕಾಣಿಕೆ ಸಂಗ್ರಹವಾಗಿದೆ.

ಗುರುರಾಘವೇಂದ್ರ ಸ್ವಾಮಿ ಮಠಕ್ಕೆ ಮಾರ್ಚ್ ತಿಂಗಳಿನ ಈ 21 ದಿನಗಳಲ್ಲಿ ಕೋಟ್ಯಂತರ ರೂ. ಕಾಣಿಕೆ ಹರಿದು ಬಂದಿದ್ದು, ಸಂಗ್ರಹವಾದ ಕಾಣಿಕೆಯಲ್ಲಿ 2,39,26,137 ರೂ. ಕರೆನ್ಸಿ ನೋಟುಗಳು. 9,2,600 ರೂ. ನಾಣ್ಯಗಳು ಸಂಗ್ರಹವಾಗಿವೆ. 14 ಗ್ರಾಂ ಚಿನ್ನ, 2,163 ಗ್ರಾಂ ಬೆಳ್ಳಿಯನ್ನ ಕಾಣಿಕೆ ರೂಪದಲ್ಲಿ ಭಕ್ತರು ನೀಡಿದ್ದಾರೆ. ಮಂತ್ರಾಲಯ ರಾಯರ ಮಠದಲ್ಲಿ ನಡೆಸಲಾದ ಹುಂಡಿ ಎಣಿಕೆ ಕಾರ್ಯ ಮಂಗಳವಾರ ರಾತ್ರಿ ಮುಕ್ತಾಯವಾಗಿದ್ದು, ಎಣಿಕೆ ಕಾರ್ಯದಲ್ಲಿ ಮಠದ ನೂರಾರು ಸಿಬ್ಬಂದಿ, ಭಜನಾ ಮಂಡಳಿ ಭಕ್ತರು, ಕರ ಸೇವಕರು ಭಾಗವಹಿಸಿದ್ದರು.

## ಜೇರಬಂಡಿ ಪಿಡಿಒ ಮೊಹಿನುದ್ದಿನ್ ನಿಧನ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.1**-

ಜೇರಬಂಡಿ ಹಾಗೂ ಗಬ್ಬೂರು ಗ್ರಾಮ ಪಂಚಾಯತಿ ಪಿಡಿಒ ಮೊಹಿನುದ್ದಿನ್ ಹೃದಯಾಘಾತದಿಂದ ಮೃತಪಟ್ಟಿರುವ ಘಟನೆ ನಡೆದಿದೆ.

ಮೃತರು ಕಳೆದ 20 ವರ್ಷಗಳಿಂದ ಯರಗೇರಾ ಗ್ರಾಪಂ ನಲ್ಲಿ ಬಿಲ್ ಕಲೆಕ್ಟರ್ ಆಗಿ, ಗಬ್ಬೂರು ಮತ್ತು ಬೇರಬಂಡಿ ಗ್ರಾಮ ಪಂಚಾಯತಿ ಪಿಡಿಒ ಆಗಿ ಸೇವೆ ಸಲ್ಲಿಸುತ್ತಿದ್ದರು, ಬೇರಬಂಡಿ ಗ್ರಾಮದಿಂದ ಯರಗೇರಾ ಗ್ರಾಮಕ್ಕೆ ಹೋಗಿದ್ದು ಮನೆಗೆ ತೆರಳುವ ಮಾರ್ಗ ಮಧ್ಯದಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಇಂದು ಮದ್ಯಾಹ್ನ ಯರಗೇರಾ ಗ್ರಾಮದ ಖಬರಸ್ಥಾನದಲ್ಲಿ ಅಂತ್ಯ ಸಂಸ್ಕಾರ ನೆರವೇರಿತು.

## ಜೈಕನ್ನಡ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.1**-ಜೈಕನ್ನಡ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷರಾಗಿದ್ದ ಪಿ. ಚಿನ್ನಯ್ಯ ಸ್ವಾಮಿ ಪಟ್ಟದಕಲ್ ಅವರು ತಮ್ಮ ಹುದ್ದೆಗೆ ಸ್ವಇಚ್ಛೆಯಿಂದ ರಾಜೀನಾಮೆ ಸಲ್ಲಿಸಿದ್ದಾರೆ. ಸುಮಾರು ಐದು ವರ್ಷಗಳಿಂದ ಸಂಘಟನೆಯಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದ ಅವರು, ನಾಡು, ನುಡಿ, ಜಲ ಹಾಗೂ ಕನ್ನಡ ಪರ ಹೋರಾಟಗಳಲ್ಲಿ ಭಾಗವಹಿಸಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಸಂಘಟನೆಯೊಳಗಿನ ವೈಯಕ್ತಿಕ ಮನಸ್ತಾಪಗಳು ಹಾಗೂ ಅಸಮಾಧಾನಕಾರಿ ಬೆಳವಣಿಗೆಗಳಿಂದ ಬೇಸರಗೊಂಡಿರುವುದಾಗಿ ತಿಳಿಸಿದ್ದಾರೆ.

ರಾಜ್ಯಾಧ್ಯಕ್ಷ ಎನ್. ಶರಣಪ್ಪ ಅಸ್ಕಿಹಾಳ ಅವರ ನಿರಂಕುಶ ಧೋರಣೆ ಹಾಗೂ ಸಂಘಟನೆಯಲ್ಲಿ ಉಂಟಾದ ಅಸಮಾಧಾನಕಾರಿ ವಾತಾವರಣವೇ ತಮ್ಮ ನಿರ್ಧಾರಕ್ಕೆ ಕಾರಣವೆಂದು ಅವರು ತಿಳಿಸಿದ್ದಾರೆ. ಮಾ.30ರಂದು ಸಂಜೆ 7 ಗಂಟೆಗೆ ರಾಜ್ಯಾಧ್ಯಕ್ಷರ ಸಮ್ಮುಖದಲ್ಲಿ ಜಿಲ್ಲಾಧ್ಯಕ್ಷರ ಗುರುತಿನ ಚೀಟಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಹಿಂತಿರುಗಿಸಿ ರಾಜೀನಾಮೆ ಸಲ್ಲಿಸಿರುವುದಾಗಿ ಮಾಹಿತಿ ನೀಡಿದ್ದಾರೆ. ಇನ್ನು ಮುಂದೆ ಜೈಕನ್ನಡ ರಕ್ಷಣಾ ವೇದಿಕೆಯ ಯಾವುದೇ ಚಟುವಟಿಕೆಗಳೊಂದಿಗೆ ತಮ್ಮ ಸಂಬಂಧ ಇರುವುದಿಲ್ಲವೆಂದು ಅವರು ಸ್ಪಷ್ಟಪಡಿಸಿದ್ದಾರೆ.

## ಏ.3 ರಂದು ಕಾಲಚಕ್ರ ನಾಟಕ ಪ್ರದರ್ಶನ-ರಂಗಸ್ವಾಮಿ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.1**-ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಂಗಸಿರಿ ಸಾಂಸ್ಕೃತಿಕ ಕಲಾ ಬಳಗ, ಲೋಹಿಯಾ ಪ್ರತಿಷ್ಠಾನ ಹಾಗೂ ರಂಗಾಯಣ ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಏ.3 ರಂದು ಸಂಜೆ 6:30ಕ್ಕೆ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಕಾಲಚಕ್ರ ನಾಟಕ ಪ್ರದರ್ಶನ ನಡೆಯಲಿದೆ ಎಂದು ರಂಗಸಿರಿ ಸಾಂಸ್ಕೃತಿಕ ಕಲಾ ಬಳಗದ ಅಧ್ಯಕ್ಷ ರಂಗಸ್ವಾಮಿ ಹೇಳಿದರು.

ಅವರಿಂದು ಮಾಧ್ಯಮ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಮರಾಠಿ ಮೂಲದ ಜಯವಂತ ದಳ್ವಿ ಅವರ ಕೃತಿಯನ್ನು ಎಚ್.ಕೆ. ಕರ್ಕೇರಾ ಕನ್ನಡಕ್ಕೆ ಅನುವಾದಿಸಿದ್ದು, ನಾಟಕಕ್ಕೆ ಹುಲುಗಪ್ಪ ಕಟ್ಟಿಮನಿ ವಿನ್ಯಾಸ ಹಾಗೂ ನಿರ್ದೇಶನ ನೀಡಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮವನ್ನು ಮಾಹಿತಿ ಆಯೋಗದ ಕಲ್ಬುರ್ಗಿ ಪೀಠದ ಆಯುಕ್ತ ಬಿ. ವೆಂಕಟಸಿಂಗ್ ಉದ್ಘಾಟಿಸಲಿದ್ದು, ವೀರಹನುಮಾನ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಿರಿಯ ನಾಗರಿಕರಾದ ಬಸವರಾಜ್ ಕಳಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಕಲಬುರಗಿ ರಂಗಾಯಣದ ಸುಜಾತ ಜಂಗಮಶೆಟ್ಟಿ ಹಾಗೂ ಲೋಹಿಯಾ ಪ್ರತಿಷ್ಠಾನದ ನಿಕಟಪೂರ್ವ ಅಧ್ಯಕ್ಷ ಭೀಮನಗೌಡ ಇಟಗಿ ಭಾಗವಹಿಸಲಿದ್ದಾರೆ.ಇದೇ ವೇಳೆ, ಕೆ. ಗಿರಿಜಾ ರಾಜಶೇಖರ ಹಾಗೂ ರಂಗಸ್ವಾಮಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿರಲಿದ್ದಾರೆ. ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನಾಟಕ ವೀಕ್ಷಿಸಲು ಮನವಿ ಮಾಡಿದರು.ಸುದ್ದಿಗೋಷ್ಠಿಯಲ್ಲಿ ಭೀಮನಗೌಡ ಇಟಗಿ ಸೇರಿದಂತೆ ಅನೇಕರಿದ್ದರು.



# ಶಿವಕುಮಾರ ಸ್ವಾಮೀಜಿಗಳಂತಹ ಮಹನೀಯರು ನಮ್ಮ ಸಮಾಜದ ಆತ್ಮಸ್ವರೂಪ-ರಾಷ್ಟ್ರಪತಿ ದ್ರೌಪದಿ ಮುರ್ಮು




**ತುಮಕೂರು,ಏ.1-**ಸಿದ್ದಗಂಗಾ ಮಠದಲ್ಲಿ ಇಂದು ನಡೆದ ಡಾ. ಶಿವಕುಮಾರ ಮಹಾಸ್ವಾಮೀಜಿಗಳ 119ನೇ ಜನ್ಮ ಜಯಂತಿ ಹಾಗೂ ಗುರುವಂದನಾ ಮಹೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿಯಾದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಶಿವಕುಮಾರ ಸ್ವಾಮೀಜಿಗಳಂತಹ ಮಹನೀಯರು ನಮ್ಮ ಸಮಾಜ ಮತ್ತು ರಾಷ್ಟ್ರದ ಆತ್ಮಸ್ವರೂಪವನ್ನು ಪ್ರತಿನಿಧಿಸುತ್ತಾರೆ. 2019ರಲ್ಲಿ ಅವರ ದೇಹ ಲೀನವಾದರೂ, ಅವರ ಆಧ್ಯಾತ್ಮಿಕತೆ ಸಮಾಜ ಮತ್ತು ರಾಷ್ಟ್ರವನ್ನು ಸದಾ ಪೋಷಿಸುತ್ತಲೇ ಇರುತ್ತದೆ. ಅವರು ತಮ್ಮ ಆಧ್ಯಾತ್ಮಿಕ ಚಟುವಟಿಕೆಗಳ ಮೂಲಕ ಮನುಕುಲಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ. ಬಡವರು ಹಾಗೂ ಹಿಂದುಳಿದ ವರ್ಗಗಳ ಸೇವೆಗೆ ಸಮರ್ಪಿತವಾಗಿದ್ದ ಅವರ ಜೀವನ, ಸೇವಾ ಕಾರ್ಯಗಳ ಮೂಲಕ ಆಧ್ಯಾತ್ಮವನ್ನು ವ್ಯಕ್ತಪಡಿಸಿದ ಅದ್ಭುತ ಉದಾಹರಣೆಯಾಗಿದೆ ಎಂದು ಮಠವು ಸ್ವಾಮೀಜಿಗಳ ಮಹತ್ವದ ಕಾರ್ಯಗಳನ್ನು ಮುಂದುವರಿಸುತ್ತಿರುವುದನ್ನು ಶ್ಲಾಘಿಸಿದರು.

ಪ್ರಾಥಮಿಕ ಶಿಕ್ಷಣದಿಂದ ಇಂಜಿನಿಯರಿಂಗ್ ಹಾಗೂ ನಿರ್ವಹಣಾ ಅಧ್ಯಯನಗಳವರೆಗೆ ಶಿಕ್ಷಣ ವ್ಯವಸ್ಥೆಯನ್ನು ಮಠವು ಒದಗಿಸುತ್ತಿರುವುದು ಸಂತೋಷದ ಸಂಗತಿಯಾಗಿದೆ. ಅಲ್ಲದೇ ಸ್ವಾಮೀಜಿಗಳ ಮಾರ್ಗದರ್ಶನದಲ್ಲಿ ಸ್ಥಾಪಿತವಾದ ಸಿದ್ಧಗಂಗಾ ಆಸ್ಪತ್ರೆ, ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆಗಳನ್ನು ನೀಡುತ್ತಿರುವುದು ಶ್ಲಾಘನೀಯ ಎಂದು ರಾಷ್ಟ್ರಪತಿಗಳು ಬಣ್ಣಿಸಿದರು.

ಸಮಾನತೆಯ ಸಮಾಜ ನಿರ್ಮಾಣಕ್ಕೆ ಮಠದಿಂದ ಅಮೂಲ್ಯ ಕೊಡುಗೆ: ಸಿದ್ಧಗಂಗಾ ಮಠವು ಶತಮಾನಗಳ ಸೇವಾ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಇಂದಿನ ಕಾಲಘಟ್ಟದಲ್ಲೂ ಮುಂದುವರಿಸುತ್ತಿರುವುದು ಪ್ರಶಂಸನೀಯ. ನಮ್ಮ ಸಂಪ್ರದಾಯದಲ್ಲಿ

ಜ್ಞಾನ ದಾನಕ್ಕೆ ಅತ್ಯಂತ ಮಹತ್ವವಿದ್ದು, ಶಿಕ್ಷಣವು ವ್ಯಕ್ತಿತ್ವ ವಿಕಾಸ ಮತ್ತು ಚರಿತ್ರೆ ನಿರ್ಮಾಣಕ್ಕೆ ಮೂಲಾಧಾರವಾಗಿದೆ. ಸ್ವಾವಲಂಬನೆಯ ದಾರಿಯನ್ನು ಶಿಕ್ಷಣವೇ ತೆರೆದಿಡುತ್ತದೆ. ಹಿಂದುಳಿದ ಮತ್ತು ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವ ಮೂಲಕ ಮಠವು ಸಮಾನತೆಯ ಸಮಾಜ ನಿರ್ಮಾಣಕ್ಕೆ ಅಮೂಲ್ಯ ಕೊಡುಗೆ ನೀಡುತ್ತಿದೆ ಎಂದು ಹೇಳಿದರು.

ಶ್ರಮ, ಸಾರ್ವಜನಿಕ ಸೇವೆ ಮತ್ತು ರಾಷ್ಟ್ರ ಸೇವೆ ಪರಸ್ಪರ ಸಂಬಂಧ ಹೊಂದಿವೆ ಎಂದ ರಾಷ್ಟ್ರಪತಿಗಳು, ಆಧ್ಯಾತ್ಮವು ಸಾರ್ವಜನಿಕ ಮತ್ತು ರಾಷ್ಟ್ರ ಸೇವೆಗೆ ಬಲವಾದ ಆಧಾರ ಒದಗಿಸುತ್ತದೆ.

ಕರ್ನಾಟಕ ರಾಜ್ಯವು ಸಾರ್ವಜನಿಕ ಸೇವೆ, ರಾಷ್ಟ್ರಸೇವೆ, ಆಧ್ಯಾತ್ಮ ಮತ್ತು ಆಧುನಿಕ ಪ್ರಗತಿಯ ಉತ್ತಮ ಉದಾಹರಣೆಯಾಗಿದೆ. ಇದಕ್ಕಾಗಿ ಕರ್ನಾಟಕದ ಪರಿಶ್ರಮಿ ಮತ್ತು ಪ್ರತಿಭಾವಂತ ಜನತೆಗೆ ಅಭಿನಂದನೆ ಸಲ್ಲಿಸಿದರು. ರಾಷ್ಟ್ರ ನಿರ್ಮಾಣದಲ್ಲಿ ಕರ್ನಾಟಕದ ಜನರು ಸದಾ ಮುಂಚೂಣಿಯಲ್ಲಿದ್ದು, ಮುಂದೆಯೂ ಇದೇ ರೀತಿ ಮುನ್ನಡೆಯುವ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

## ಹಾವೇರಿ: ಪ್ಲಾಟ್ ಫಾರ್ಮ್‌ಗೆ ನುಗ್ಗಿ ಜನರಿಗೆ ಬಸ್ ಡಿಕ್ಕಿ-ಮಗು ಸಾವು, ಮೂವರಿಗೆ ಗಾಯ



**ಹಾವೇರಿ,ಏ.1-**ನಿಲುಗಡೆ ವೇಳೆ ವೇಗವಾಗಿ ಬಂದ ವಾಯವ್ಯ ಕರ್ನಾಟಕ ಸಾರಿಗೆ ಬಸ್ ನಿಲ್ದಾಣದ ಪ್ಲಾಟ್‌ಫಾರ್ಮ್ ಮೇಲ್ ಹತ್ತಿ, ಅಲ್ಲಿದ್ದ ಜನರಿಗೆ ಡಿಕ್ಕಿ ಹೊಡೆದು 2 ವರ್ಷದ ಬಾಲಕ ಸಾವನ್ನಪ್ಪಿ, ಇತರ ಮೂವರು ಗಾಯಗೊಂಡಿದ್ದಾರೆ. ಹಾವೇರಿ ಕೇಂದ್ರ ಬಸ್ ನಿಲ್ದಾಣದಲ್ಲಿ ಸೋಮವಾರ ಬೆಳಗ್ಗೆ ದುರ್ಘಟನೆ ಸಂಭವಿಸಿತು.

ಬಸ್ ಡಿಕ್ಕಿಯಾಗಿ ಗಾಯಗೊಂಡ ಎರಡು ವರ್ಷದ್ ಮಗು ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದೆ. ಮೃತಪಟ್ಟ ಮಗುವನ್ನು ಸವಣೂರು ಪಟ್ಟಣದ ಹಜರತ್ ಅಲಿ ಎಂದು ಗುರುತಿಸಲಾಗಿದೆ. ಇನ್ನುಳಿದ ಮೂವರು ಗಾಯಾಳುಗಳಾದ ವಾಸುದೇವ (44), ಹರ್ಷಾ (6) ಹಾಗೂ ಕಾವ್ಯಾಂಜಲಿ (39) ಎಂಬವರಿಗೆ ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇವರೆಲ್ಲರೂ ಬಂಕಾಪುರ ಪಟ್ಟಣದ ನಿವಾಸಿಗಳು.

ಘಟನೆ ನಡೆದಿದ್ದು ಹೀಗೆ: ಎಂದಿನಂತೆ ನಿಲ್ದಾಣದಲ್ಲಿ ಜನರು ಬಸ್‌ಗಳಿಗಾಗಿ ಕಾಯುತ್ತಿದ್ದರು. ಈ ವೇಳೆ, ಹಾವೇರಿ-ಲಕ್ಷ್ಮೇಶ್ವರ ಬಸ್ ಬಂದಿದ್ದು, ಅಪಘಾತವಾಗುವ ಅರಿವಿಲ್ಲದ ಜನರು ಪ್ಲಾಟ್‌ಫಾರ್ಮ್ ಮೇಲ್ ನಿಂತು ಬಸ್ ಬೋರ್ಡ್ ನೋಡುತ್ತಿದ್ದರು. ಆದರೆ ವೇಗವಾಗಿ ಬಂದ ಬಸ್, ನಿಲುಗಡೆಯಾಗದೆ ಪ್ಲಾಟ್‌ಫಾರ್ಮ್ ಮೇಲೆ ನುಗ್ಗಿದೆ. ಇದರಿಂದ ಅಲ್ಲಿದ್ದ ಜನರು ಬಸ್ ಎದುರುಗಡೆ ಸಿಲುಕಿದ್ದಾರೆ. ಘಟನೆಯ ಭಯಾನಕ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.ಘಟನೆಗೆ ಚಾಲಕನ ನಿರ್ಲಕ್ಷ್ಯ ಹಾಗೂ ವೇಗದ ಚಾಲನೆ ಕಾರಣವೇ? ಇಲ್ಲವೇ ಬಸ್‌ನ ತಾಂತ್ರಿಕ ಸಮಸ್ಯೆಯಿಂದ ಸಂಭವಿಸಿದೆಯೇ? ಎಂಬುದು ತನಿಖೆಯಿಂದ ತಿಳಿದು ಬರಬೇಕಿದೆ.

ಬಸ್ ಮುಂಭಾಗ ಜಖಂಗೊಂಡಿದೆ. ಅವಘಡದಿಂದ ಬಸ್ ನಿಲ್ದಾಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಹಾವೇರಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಪೊಲೀಸ್ ವಾಹನ ಚಾಲಕ ಸಾವು: ಬೈಕ್‌ಗೆ ಖಾಸಗಿ ಬಸ್ ಡಿಕ್ಕಿ ಹೊಡೆದು, ಪೊಲೀಸ್ ವಾಹನ ಚಾಲಕ ಸ್ಥಳದಲ್ಲೇ ಮೃತಪಟ್ಟ ಘಟನೆ ಬುಧವಾರ ಬೆಳಗ್ಗೆ ಚಿಕ್ಕಬಳ್ಳಾಪುರದ ಶಿಡ್ಲಘಟ್ಟ ರಸ್ತೆಯ ಬಜಾಜ್ ಶೋರೂಂ ಬಳಿ ಸಂಭವಿಸಿತ್ತು

## ಗ್ಯಾಸ್ ಸಿಲಿಂಡರ್ ಸ್ಫೋಟದಿಂದ ಅಗ್ನಿ ಅವಘಡ: ಕೂದಲೆಳೆ ಅಂತರದಲ್ಲಿ ಐವರು ಪಾರು

**ಬೆಂಗಳೂರು,ಏ.1-**ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡ ಘಟನೆ ಲಗ್ಗೆರೆಯ ರಾಜೀವ್ ಗಾಂಧಿ ನಗರದಲ್ಲಿ ಇಂದು ನಡೆದಿದೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಮನೆಯಲ್ಲಿದ್ದ ಐವರೂ ಹೊರಬಂದಿದ್ದು, ಅನಾಹುತ ತಪ್ಪಿದೆ. ಮನೆಯಲ್ಲಿದ್ದ ವಸ್ತುಗಳು ಸಂಪೂರ್ಣವಾಗಿ ಸುಟ್ಟು ಕರಕಲಾಗಿವೆ.

ಮೂರಂತಸ್ತಿನ ಕಟ್ಟಡದ ಮೊದಲ ಮಹಡಿಯಲ್ಲಿ ಹರಗಯ್ಯ ಹಾಗೂ ಭಾಗ್ಯಮ್ಮ ದಂಪತಿ ತಮ್ಮ ಮಕ್ಕಳೊಂದಿಗೆ ವಾಸವಾಗಿದ್ದರು. ಬೆಳಗ್ಗೆ ಮನೆಗೆ ಹೊಸ ಗ್ಯಾಸ್ ಸಿಲಿಂಡರ್ ಬಂದಿತ್ತು. ಖಾಲಿಯಾಗಿದ್ದ ಹಳೆ ಸಿಲಿಂಡರ್ ಬದಲಿಸಲು ಮುಂದಾದಾಗ ಅನಿಲ ಸೋರಿಕೆಯಾಗಿ ಹಠಾತ್ ಬೆಂಕಿ ಕಾಣಿಸಿಕೊಂಡಿದೆ.

ನೋಡನೋಡುತ್ತಿದ್ದಂತೆಯೇ ಬೆಂಕಿ ಇಡೀ ಮನೆಗೆ ಆವರಿಸಿದೆ. ತಕ್ಷಣ ಕುಟುಂಬಸ್ಥರು ಮನೆಯಿಂದ ಹೊರಗೆ ಓಡಿ ಬಂದಿದ್ದಾರೆ. ಇದರಿಂದಾಗಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಸ್ಫೋಟದ ತೀವ್ರತೆಗೆ ಮನೆಯಲ್ಲಿದ್ದ ದಿನಬಳಕೆ ವಸ್ತುಗಳು ಹಾಗೂ ಪೀಠೋಪಕರಣ ಭಸ್ಮವಾಗಿವೆ.

ವಿಷಯ ತಿಳಿಯುತ್ತಿದ್ದಂತೆಯೇ ಘಟನಾ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ರಾಜಗೋಪಾಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಿಲಿಂಡರ್ ಬದಲಿಸುವಾಗ ಅನಿಲ ಸೋರಿಕೆಯಾಗಿ ಸ್ಫೋಟ, ಐವರಿಗೆ ಗಾಯ(ಪ್ರತ್ಯೇಕ ಘಟನೆ): ಗ್ಯಾಸ್ ಸಿಲಿಂಡ್ರ್ ಸ್ಫೋಟದಿಂದ ಒಂದೇ ಕುಟುಂಬದ ಐವರು ಗಾಯಗೊಂಡಿದ್ದ ಘಟನೆ ಹಾಸನ ಜಿಲ್ಲೆಯ ಅರಕಲಗೂಡು ತಾಲೂಕಿನ ಕೆ.ಅಲ್ಲೂರು ಗ್ರಾಮದಲ್ಲಿ ಮಂಗಳವಾರ ನಡೆದಿತ್ತು. ಅನಿಲ ಸೋರಿಕೆ ಅವಘಡಕ್ಕೆ ಕಾರಣವೆಂದು ತಿಳಿದು ಬಂದಿದೆ. ಸುಂದರೇಶ್ ಎಂಬವರ ಮನೆಯಲ್ಲಿ ಖಾಲಿ ಗ್ಯಾಸ್ ಸಿಲಿಂಡರ್ ತೆಗೆದು ತುಂಬಿದ ಸಿಲಿಂಡರ್ ಅಳವಡಿಸುವ ವೇಳೆ ಅನಿಲ ಸೋರಿಕೆಯಾಗಿ ಸ್ಫೋಟ ಸಂಭವಿಸಿದೆ. ಕ್ಷಣಾರ್ಧದಲ್ಲಿ ಬೆಂಕಿ, ಹೊಗೆ ಆವರಿಸಿದ್ದು ಮನೆಯಲ್ಲಿದ್ದವರು ಹೊರ ಓಡಿ ಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ತಕ್ಷಣ ಸ್ಥಳೀಯರು ನೆರವಿಗೆ ಧಾವಿಸಿ ಬೆಂಕಿ ನಂದಿಸಲು ಸಹಕರಿಸಿದ್ದರು. ಓರ್ವ ಮಹಿಳೆ ಹಾಗೂ ಆಕೆಯ ಪುತ್ರ ಸೇರಿ ನಾಲ್ವರು ಗಾಯಗೊಂಡಿದ್ದಾರೆ. ತಕ್ಷಣವೇ ಅವರನ್ನು ಕೊಣನೂರು ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿದೆ. ಇದೀಗ ಗಾಯಾಳುಗಳ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದರು. ಸ್ಫೋಟದಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಗೃಹೋಪಯೋಗಿ ವಸ್ತುಗಳು, ಪೀಠೋಪಕರಣಗಳು ಮತ್ತು ಇತರ ಸಾಮಗ್ರಿಗೆ ಹಾನಿಯಾಗಿದೆ. ಕೊಣನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜನರಿಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣ ತಿಳಿಸಿ ಮುಖ್ಯಮಂತ್ರಿಗೆ ಬಿ.ವೈ.ವಿಜಯೇಂದ್ರ ಆಗ್ರಹ..!


**ಬಾಗಲಕೋಟೆ,ಏ.1-**ಹಣಕಾಸಿನ ಸಚಿವರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣವನ್ನು ಜನರಿಗೆ ತಿಳಿಸುವ ಪುಣ್ಯದ ಕೆಲಸ ಮಾಡಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದು ಮೂರು ವರ್ಷಗಳಾಗಿವೆ. ಅಧಿಕಾರಕ್ಕೆ ಬಂದ ಒಂದೇ ತಿಂಗಳಲ್ಲಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುತ್ತೇವೆ ಎಟದು ಭರವಸೆ ನೀಡಿದ್ದೀರಿ. ಅದು ಮರೆತು ಹೋಯಿತೇ? ಎಂದು ಕೇಳಿದರು.

2 ಲಕ್ಷ 86 ಸಾವಿರಕ್ಕೂ ಹೆಚ್ಚು ಹುದ್ದೆಗಳು ನೇಮಕಾತಿ ಮಾಡದೇ ನಾಡಿನ ಯುವಜನತೆ ಬೀದಿಗಿಳಿದು ಹೋರಾಟ ಮಾಡುವ ದುಸ್ಥಿತಿಗೆ ತಾವು ತಂದಿದ್ದೀರಿ. ಯುವಜನತೆ ತಮ್ಮ ಬಳಿ ಅಹವಾಲು ಮಂಡಿಸಲು ರಾಜ್ಯ ಹೈಕೋರ್ಟ್ ಮಧ್ಯಸ್ಥಿಕೆ ವಹಿಸಬೇಕಾಯಿತು ಎಂದು ಗಮನ ಸೆಳೆದರು.

ಧಾರವಾಡದಲ್ಲಿ ನ್ಯಾಯಕ್ಕಾಗಿ ಲಕ್ಷಾಂತರ ಯುವಜನತೆ ಒತ್ತಾಯಿಸಿದಾಗ ಲಾಠಿಪ್ರಹಾರ ಮಾಡಿದ್ದೀರಿ. ಯಾಕೆ ಸತ್ಯ ಮರೆಮಾಚುತ್ತಿದ್ದೀರಿ ಎಂದು ಪ್ರಶ್ನಿಸಿದರು.

ಗ್ಯಾರಂಟಿಗಳಿಗೆ ಹಣ ಕ್ರೋಡೀಕರಿಸಲು ಸಾಧ್ಯವಾಗದೇ ಹೈಕೋರ್ಟಿನ ಕುಂಟು ನೆಪ, ಮೀಸಲಾತಿ ನೆಪ ಹೇಳಿಕೊಂಡು ನೇಮಕಾತಿ ಯನ್ನು ಮುಂದೂಡುತ್ತಿರುವುದು ತಾವಲ್ಲವೇ



ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸಿದರು.

**ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ?:** ಮಂಡ್ಯ ಜಿಲ್ಲೆಯ ಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳಿಗೆ ಪಿಂಚಣಿ ಕೊಡುವುದನ್ನೂ 10 ತಿಂಗಳಿಂದ ನಿಲ್ಲಿಸಿದ್ದಾರೆ. ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ ಎಂದು ಪ್ರಶ್ನೆ ಹಾಕಿದರು. ಅತಿಥಿ ಉಪನ್ಯಾಸಕರಿಗೆ 2 ತಿಂಗಳಿಂದ ಸಂಬಳ ನೀಡದೇ ಇರುವುದು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಎತ್ತಿ ತೋರಿಸುವುದಿಲ್ಲವೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

ರಾಜ್ಯದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಾನೂನು- ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್ ಇಲಾಖೆಗೆ 15- 20 ದಿನ, ಒಂದು ತಿಂಗಳಾದರೂ ಸಂಬಳ ಕೊಡುವುದಕ್ಕೆ ಆಗುತ್ತಿಲ್ಲ. ಇದು ಆರ್ಥಿಕ ಪರಿಸ್ಥಿತಿ ಯಾವ ಮಟ್ಟಿಗೆ ಹೋಗಿದೆ ಎಂಬುದನ್ನು ತೋರಿಸುವುದಿಲ್ಲವೇ ಎಂದು ಕೇಳಿದರು.

ತುಂಗಭದ್ರಾ ಅಣೆಕಟ್ಟಿನ ಗೇಟ್ ಕುಸಿಯಿತು. ನಾವು ತೆಲಂಗಾಣ, ಆಂಧ್ರವನ್ನು ಕಾಯುವುದಿಲ್ಲ. ರಾಜ್ಯ ಸರಕಾರವೇ ಹಣ ಹಾಕಿ 21 ಗೇಟ್ ಕೂರಿಸಲಿದೆ ಎಂದು ಡಿ.ಕೆ.ಶಿವಕುಮಾರ್ ಅವರು ಹೇಳಿಕೆ ಕೊಟ್ಟಿದ್ದರು. ಆಂಧ್ರವು ಗೇಟ್ ದುರಸ್ತಿಗೆ ಹಣ ಕೊಟ್ಟಿತು. ಸಂಬಳಕ್ಕಾಗಿ 20 ಕೋಟಿ ಹೆಚ್ಚುವರಿಯಾಗಿ ಕೊಟ್ಟರೆ, ಆ ಹಣದಿಂದ ರಾಜ್ಯ ಸರಕಾರ ಕೊಟ್ಟ 10 ಕೋಟಿ ಹಿಂಪಡೆಯುವ ಕೆಲಸ ಮಾಡಿದೆ. ಇದು ವಾಸ್ತವಿಕ ಸತ್ಯ. ಇದನ್ನು ಅರ್ಥ ಮಾಡಿಕೊಳ್ಳಲು ಆರ್ಥಿಕ ತಜ್ಞರಾಗಬೇಕಿಲ್ಲ ಎಂದು ಮುಖ್ಯಮಂತ್ರಿಗಳ ಗಮನ ಸೆಳೆದರು.

**ಬಾಗಲಕೋಟೆಯಲ್ಲಿ 5 ದಿನ ಬಿಡಾರ ಹೂಡುವ ಪರಿಸ್ಥಿತಿ ಯಾಕೆ? :** ಅಭಿವೃದ್ಧಿ- ಗ್ಯಾರಂಟಿ ಕುರಿತು ನಿಮಗೆ ಆತ್ಮವಿಶ್ವಾಸ ಇದ್ದಿದ್ದರೆ, ಮುಖ್ಯಮಂತ್ರಿಗಳೇ ನೀವು ಬಾಗಲಕೋಟೆಯಲ್ಲಿ 5 ದಿನ ಬಿಡಾರ ಹೂಡುವ ಪರಿಸ್ಥಿತಿ ನಿರ್ಮಾಣ ಆಗುತ್ತಿರಲಿಲ್ಲ ಎಂದು ವ್ಯಂಗ್ಯವಾಡಿದರು. ಸಚಿವಸಂಪುಟದ ಪಟಾಲಂನೊಂದಿಗೆ ಸೂಟ್‌ಕೇಸ್ ಹಿಡಿದುಕೊಂಡು ಕೂರುವ ದಾರಿದ್ರ್ಯ ಬರುತ್ತಿರಲಿಲ್ಲ ಎಂದು ಟೀಕಿಸಿದರು. ಈಗಲೂ ಕಾಲಮಿಂಚಿಲ್ಲ. ರಾಜ್ಯದ ಹಣಕಾಸಿನ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಒತ್ತಾಯಿಸಿದರು.

## ಕೇಂದ್ರಕ್ಕಿಂತ ನಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಿದೆ, ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ಧ-ಸಿಎಂ ಸಿದ್ದರಾಮಯ್ಯ



**ಬೆಂಗಳೂರು,ಏ.1-**ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಕ್ಕೆ ಸಿಎಂ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಆರ್ಥಿಕ ಕ್ಷೇತ್ರದ ಬಗೆಗಿನ ಅವರ ಅಜ್ಞಾನ, ಆಡಳಿತದ ಅನುಭವದ ಕೊರತೆ ಮತ್ತು ರಾಜಕೀಯ ಹತಾಶೆ ತೋರಿಸುತ್ತದೆ. ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ಧನಿದ್ದೇನೆ, ಅವರು ಬರುತ್ತಾರೆಯೇ ಕೇಳಿನೋಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

ಕಳೆದ ತಿಂಗಳಷ್ಟೇ ಈ ಆರ್ಥಿಕ ವರ್ಷದ ಆಯವ್ಯಯಪತ್ರವನ್ನು ನಾನು ಮಂಡಿಸಿದ್ದೇನೆ, ಅದು ಅಂಕಿ-ಅಂಶಗಳ ಕಾಗದದ ಕಂತೆ ಅಲ್ಲ, ರಾಜ್ಯದ ಏಳು ಕೋಟಿ ಕನ್ನಡಿಗರಿಗೆ ಒಪ್ಪಿಸಿರುವ ಪ್ರಾಮಾಣಿಕ ಲೆಕ್ಕಪತ್ರ. ಆ ಆಯವ್ಯಯವನ್ನು ವಿಧಾನಮಂಡಲದ ಉಭಯ ಸದನಗಳು ಒಪ್ಪಿಕೊಂಡು ಅಂಗೀಕರಿಸಿವೆ. ಇದೇ ನಮ್ಮ ಶ್ವೇತಪತ್ರ ಎಂದೂ ಅವರು ಹೇಳಿದ್ದಾರೆ.

**ಅನುಮಾನವಿದ್ದರೆ ವಿವರಣೆಗೆ ಸಿದ್ಧ :** ವಿಧಾನಮಂಡಲದ ಉಭಯ ಸದನಗಳಲ್ಲಿ ಕೂಲಂಕಷವಾಗಿ ಚರ್ಚೆ ನಡೆದಿದೆ. ವಿಜಯೇಂದ್ರ ಅವರ ಪಕ್ಷದವರೂ ಸೇರಿ 21 ಜನ ವಿರೋಧ ಪಕ್ಷದ ಸದಸ್ಯರೂ ಮಾತನಾಡಿ ಎತ್ತಿದ್ದ ಪ್ರಶ್ನೆಗಳಿಗೆ ಸೂಕ್ತ ಉತ್ತರ ನೀಡಿದ್ದೇನೆ. ಇದರ ಬಗ್ಗೆ ಇನ್ನೂ ನಿಮಗೆ ಅನುಮಾನಗಳಿದ್ದರೆ ವಿವರಣೆ ಕೊಡಲು ನಾನು ಸಿದ್ಧನಿದ್ದೇನೆ. ಉಪಚುನಾವಣೆ ಅಖಾಡದಲ್ಲಿಯೇ ನಿಮ್ಮ ಜೊತೆ ಬಹಿರಂಗ ಚರ್ಚೆಗೂ ನಾನು ಸಿದ್ಧ. ದಯವಿಟ್ಟು ಕೇವಲ ರಾಜಕೀಯ ಮಾತನಾಡಬೇಕೆಂಬ ಬಾಯಿ ಚಪಲಕ್ಕಾಗಿ ಆಯವ್ಯಯ ಪತ್ರದ ಪಾವಿತ್ರ್ಯ ಹಾಳು ಮಾಡಲು ಹೋಗಬೇಡಿ ಎಂದಿದ್ದಾರೆ.

ರಾಜ್ಯ ದಿವಾಳಿ ಸ್ಥಿತಿಯಲ್ಲಿದೆ ಎಂಬ ಆರೋಪದ ಹಿಂದೆ ನಮ್ಮ ಸರ್ಕಾರವನ್ನು ರಾಜಕೀಯವಾಗಿ ಎದುರಿಸಲಾಗದ ಬಿಜೆಪಿ ನಾಯಕರ ಅಸಹಾಯಕತೆ, ಹತಾಶೆ ಮತ್ತು ಅಸೂಯೆ ಇದೆ. ಯಾವ ಇಲಾಖೆಯೂ ನೌಕರರಿಗೆ ಸಂಬಳ ನೀಡಲಾಗದ ದಿವಾಳಿ ಸ್ಥಿತಿಯಲ್ಲಿಲ್ಲ. ನಮ್ಮ ಸರ್ಕಾರ ಆರ್ಥಿಕವಾಗಿ ಮಾತ್ರವಲ್ಲ ರಾಜಕೀಯವಾಗಿಯೂ ಸುಭದ್ರವಾಗಿದೆ. ರಾಜ್ಯದ ಜನತೆ ನೆಮ್ಮದಿಯಿಂದ ಇದ್ದಾರೆ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ.

**ಕೇಂದ್ರಕ್ಕಿಂತ ನಮ್ಮ ರಾಜ್ಯದ ಆರ್ಥಿಕ ಸ್ಥಿತಿ ಉತ್ತಮ :** ಕರ್ನಾಟಕದ ಆರ್ಥಿಕ ಸ್ಥಿತಿ ನಿಮ್ಮ ಪಕ್ಷದ ಆಡಳಿತ ಇರುವ ಕೇಂದ್ರ ಸರ್ಕಾರಕ್ಕಿಂತಲೂ ಉತ್ತಮ ಸ್ಥಿತಿಯಲ್ಲಿದೆ. ನಮ್ಮ ಈ ವರ್ಷದ ನಮ್ಮ ಬಜೆಟ್ ಗಾತ್ರ 4,48,004 ಕೋಟಿ ರು.ಗಳಾಗಿದ್ದು, ಇದು ಕಳೆದ ವರ್ಷದ ಬಜೆಟ್ ಗಾತ್ರಕ್ಕಿಂತ 38,455 ಕೋಟಿ ರು.ಗಳಷ್ಟು ಹೆಚ್ಚಿನದ್ದಾಗಿದೆ.

ನಮ್ಮ ಬಜೆಟ್ ಗಾತ್ರದಲ್ಲಿ ಶೇ.9.4ರಷ್ಟು ಬೆಳವಣಿಗೆಯಾಗಿದ್ದರೆ, ಕೇಂದ್ರ ಸರ್ಕಾರದ ಬಜೆಟ್ ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.5.6ರಷ್ಟು ಮಾತ್ರ ಬೆಳವಣಿಗೆ ಸಾಧಿಸಿದೆ. ಕಳೆದ ವರ್ಷ 50.66 ಲಕ್ಷ ಕೋಟಿ ರು.ಗಳ ಬಜೆಟ್ ಮಂಡಿಸಿದ್ದ ಕೇಂದ್ರ ಸರ್ಕಾರ ಈ ವರ್ಷ 53.47 ಲಕ್ಷ ಕೋಟಿ ರು. ಗಾತ್ರದ ಬಜೆಟ್ ಮಂಡಿಸಿದ್ದಾರೆ. ನಮ್ಮ ಬಜೆಟ್ ಗಾತ್ರ ಆರ್ಥಿಕ ಪ್ರಗತಿಯನ್ನು ಸೂಚಿಸುತ್ತಿದೆ. ಆರ್ಥಿಕ ಹಿಂಜರಿತ ಇದ್ದಿದ್ದರೆ ಈ ಪ್ರಗತಿ ಸಾಧ್ಯವಾಗುತ್ತಿತ್ತೇ ಎಂದು ಪ್ರಶ್ನಿಸಿದ್ದಾರೆ. ನಾನು ಎಂದೂ ಸಾಲ ಮಾಡಬಾರದು ಎಂದು ಹೇಳಿಲ್ಲ. ಹೇಳುವುದೂ ಇಲ್ಲ. ಎಲ್ಲ ಅಭಿವೃದ್ಧಿ ಹೊಂದಿದ ಆರ್ಥಿಕತೆಗಳಲ್ಲೂ ಸಾಲ ದೊಡ್ಡ ಪ್ರಮಾಣದಲ್ಲೇ ಇದೆ. ಆದರೆ ಮಾಡುವ ಸಾಲದ ಹಣವನ್ನು ಮೂಲಸೌಕರ್ಯ ಮತ್ತು ಆರ್ಥಿಕ ಚಟುವಟಿಕೆಗಳಿಗಾಗಿ ಹೂಡಿಕೆ ಮಾಡಿದಾಗ ಅದರಿಂದ ಬರುವ ಪ್ರತ್ಯಕ್ಷ ಮತ್ತು ಪರೋಕ್ಷ ಗಳಿಕೆ ಆರ್ಥಿಕತೆಯನ್ನು ಇನ್ನಷ್ಟು ಸದೃಡಗೊಳಿಸುತ್ತದೆ. ಬಿಜೆಪಿ ಅಧಿಕಾರದಲ್ಲಿರುವ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ಅರ್ಥಿಕತೆಯನ್ನು ಸೂಕ್ಷ್ಮವಾಗಿ ಅವಲೋಕನ ಮಾಡಿದರೆ ಯಾರು ಆರ್ಥಿಕತೆಯನ್ನು ದಿವಾಳಿ ಸ್ಥಿತಿಗೆ ತಳ್ಳಿದವರು ಎನ್ನುವುದು ಸ್ಪಷ್ಟವಾಗುತ್ತದೆ. ವಿಜಯೇಂದ್ರ ಅವರೇ ಇನ್ನೊಮ್ಮೆ ಇಂತಹ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುವ ಮೊದಲು ಸ್ವಲ್ಪ ಹೋಮ್ ವರ್ಕ್ ಮಾಡಿಕೊಂಡು ಬನ್ನಿ, ಮಾತನಾಡೋಣ ಎಂದು ತೀಕ್ಷ್ಣವಾಗಿ ಹೇಳಿದ್ದಾರೆ.

## ಯುದ್ಧದಿಂದ ವೈದ್ಯಕೀಯ ಕ್ಷೇತ್ರಕ್ಕೂ ಹೊಡೆತ ರಾಜ್ಯದ ಅತಿದೊಡ್ಡ ಸಿರಿಂಜ್ ಉತ್ಪಾದನಾ ಘಟಕ ಸ್ಥಗಿತ ಆತಂಕ

**ಹುಬ್ಬಳ್ಳಿ, ಏ.1-**ಇರಾನ್ ಮೇಲೆ ಅಮೆರಿಕಾ ಮತ್ತು ಇಸ್ರೇಲ್ ನಡೆಸುತ್ತಿರುವ ಯುದ್ದದಿಂದಾಗಿ ಈಗಾಗಲೇ ಕಮರ್ಷಿಯಲ್ ಸಿಲಿಂಡರ್ ಅಭಾವ ಉಂಟಾಗಿದೆ. ಆಮದು, ರಫ್ತು ಮೇಲೆ ಬೀರಿದ ಪರಿಣಾಮ ದಿಂದ ಅನೇಕ ವಸ್ತುಗಳ ಬೆಲೆ ಹೆಚ್ಚಳವಾಗಿವೆ. ಇದೇ ರೀತಿ ಯುದ್ಧ ಮುಂದವರಿದರೆ ವೈದ್ಯಕೀಯ ವಸ್ತುಗಳಿಗೆ ಕೂಡ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗುವ ಆತಂಕ ಎದುರಾಗಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಹೆಚ್ಚು ಬಳಕೆಯಾಗುವ ಇಂಜೆಕ್ಷನ್ ಸಿರಿಂಜ್, ಐವಿ ಕೆನಾಲ್ ಸೇರಿದಂತೆ ಇನ್ನಿತರ ವಸ್ತುಗಳ ಉತ್ಪಾದನೆಗೆ ಕಚ್ಚಾವಸ್ತುವಿನ ಕೊರತೆ ಆರಂಭವಾಗಿದೆ. ಬಹುತೇಕ ಘಟಕಗಳು ಕಚ್ಚಾವಸ್ತುಗಳಿಲ್ಲದೇ ಬಂದ್ ಆಗುವ ಸ್ಥಿತಿಗೆ ತಲುಪಿವೆ.

ಯುದ್ದದಿಂದ ಜಗತ್ತಿನ ಅನೇಕ ದೇಶಗಳು ಹತ್ತಾರು ರೀತಿಯ ತೊಂದರೆ ಅನುಭವಿಸುತ್ತಿವೆ. ಈಗಾಗಲೇ ದೇಶದಲ್ಲಿ ಕಮರ್ಷಿಯಲ್ ಸಿಲಿಂಡರ್ ಅಭಾವ, ಆಟೋ ಗ್ಯಾಸ್ ಸಿಗದೇ ಆಟೋ ಚಾಲಕರ ಪರದಾಟ, ಅನೇಕ ವಸ್ತುಗಳ ಬೆಲೆ ಹೆಚ್ಚಳವಾಗಿದ್ದರೆ, ಅನೇಕ ವಸ್ತುಗಳ ಬೆಲೆ ಕಡಿಮೆಯಾಗಿದ್ದರಿಂದ ರೈತರು ಪರದಾಡುತ್ತಿದ್ದಾರೆ. ಆದರೆ ಯುದ್ಧ ಹೀಗೆ ಮುಂದವರಿದರೆ ಮತ್ತೊಂದು ದೊಡ್ಡ ಗಂಡಾಂತರ ಉಂಟಾಗುವ ಆತಂಕ ಇದೀಗ ಎದುರಾಗಿದೆ. ಯುದ್ಧ ಮುಂದುವರಿದರೆ ವೈದ್ಯಕೀಯ ಕ್ಷೇತ್ರದ ಮೇಲೆ ದೊಡ್ಡ ಪರಿಣಾಮವನ್ನುಂಟು ಮಾಡಲಿದ್ದು,



ರೋಗಿಗಳು ಪರದಾಡಬೇಕಾದ ಸ್ಥಿತಿ ನಿರ್ಮಾಣವಾಗಲಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಹೆಚ್ಚಾಗಿ ಬಳಕೆಯಾಗುವುದು ಇಂಜೆಕ್ಷನ್ ಸಿರಿಂಜ್‌ಗಳು, ಡ್ರಿಪ್‌ಗೆ ಹಾಕುವ ಐವಿ ಕ್ಯಾನಲ್‌ಗಳು ಸಿಗದಂತಹ ಸ್ಥಿತಿ ನಿರ್ಮಾಣವಾಗಲಿದೆ ಎನ್ನುತ್ತಿದ್ದಾರೆ ಫಾರ್ಮಾ ವಸ್ತುಗಳ ಉತ್ಪಾದನಾ ಕಂಪನಿಗಳು.

**ಫಾರ್ಮಾ ಕಂಪನಿಗಳ ಆತಂಕ :** ಸಿರಿಂಜ್, ಐವಿ ಕ್ಯಾನಲ್‌ಗಳ ಉತ್ಪಾದನೆಗೆ ಪೆಟ್ರೋಲಿಯಂ ಉಪ ಉತ್ಪನ್ನವಾಗಿರುವ ಪಾಲಿ ಪ್ರಿಪಲಿನ್ ಕಚ್ಚಾವಸ್ತುವಿನ ಅವಶ್ಯಕತೆ ಇದೆ. ಆದರೆ ಯುದ್ದದಿಂದಾಗಿ ಈ ಕಚ್ಚಾವಸ್ತುವಿನ ಕೊರತೆ ದೊಡ್ಡ ಮಟ್ಟದಲ್ಲಿ ಆರಂಭವಾಗಿದೆ. ಹುಬ್ಬಳ್ಳಿ ಹೊರವಲಯದ ರಕ್ಷಂ ಮೆಡಿಕಲ್ ಡಿವೈಸ್ ಕಂಪನಿಗೆ ಪ್ರತಿ ತಿಂಗಳು 150 ಟನ್ ಪಾಲಿ ಪ್ರಿಪಲಿನ್ ಕಚ್ಚಾವಸ್ತುಬೇಕು. ಆದರೆ 20ಟನ್ ಮಾತ್ರ ಪೂರೈಕೆ ಆಗುತ್ತಿದೆ. ಹೀಗಾಗಿ ಪ್ರತಿ ದಿನ 18 ಲಕ್ಷ ಸಿರಿಂಜ್ ಉತ್ಪಾದನೆ ಮಾಡುತ್ತಿದ್ದ ಘಟಕದಲ್ಲಿ ಇದೀಗ ನಾಲ್ಕು ಲಕ್ಷ ಸಿರಿಂಜ್‌ಗಳ ಉತ್ಪಾದನೆ ಮಾತ್ರ ಆಗುತ್ತಿದೆ. ಯುದ್ಧ ಹೀಗೆ ಮುಂದುವರಿದರೆ ಸಿಗುವ ಕಚ್ಚಾವಸ್ತುಗಳು ಸಿಗದಂತಾಗಬಹುದು ಎನ್ನುವ ಆತಂಕ ಇದೀಗ ಫಾರ್ಮಾ ಕಂಪನಿಗಳಿಗೆ ಎದುರಾಗಿದೆ.

**ಸಿರಿಂಜ್ ಬೆಲೆ ಏರಿಕೆ? :** ಹುಬ್ಬಳ್ಳಿ ರಕ್ಷಂ ಮೆಡಿಕಲ್ ಡಿವೈಸ್ ಕಂಪನಿಯಲ್ಲಿ ಮೂರು ಶಿಫ್ಟ್‌ನಲ್ಲಿ 300ಕ್ಕೂ ಅಧಿಕ ಕಾರ್ಮಿಕರು ಕೆಲಸ ಮಾಡುತ್ತಿದ್ದರು. ಆದರೆ ಇದೀಗ ಕಚ್ಚಾವಸ್ತುಗಳ ಪೂರೈಕೆ ಕಡಿಮೆ ಆಗಿದ್ದರಿಂದ ಎರಡು ಶಿಫ್ಟ್ ಕ್ಯಾನ್ಸಲ್ ಮಾಡಿದ್ದು, ಕೇವಲ ಒಂದೇ ಒಂದು ಶಿಫ್ಟ್‌ನಲ್ಲಿ ಮಾತ್ರ ಕೆಲಸ ನಡೆಯುತ್ತಿದೆ. ಇದೀಗ ಬರುತ್ತಿರುವ ಕಚ್ಚಾವಸ್ತುವು ಬರದೇ ಇದರೆ ಸಿರಿಂಜ್ ತಯಾರಾಗುವ ಘಟಕವನ್ನು ಬಂದ್ ಮಾಡಬೇಕಾಗುತ್ತದಯಂತೆ. ಇದರಿಂದ ಮುಂದಿನ ದಿನಗಳಲ್ಲಿ ಸಿರಿಂಜ್ ಬೆಲೆ ಏರಿಕೆ ಜೊತೆಗೆ ಅವುಗಳು ಸಿಗದಂತಾಗಬಹುದು. ರೋಗಿಗಳಿಗೆ ಇದರಿಂದ ದೊಡ್ಡ ಮಟ್ಟದ ಹೊಡೆತ ಬೀಳಲಿದೆಯಂತೆ.


ಸದ್ಯ ಎಲ್ಲರು ಕೇವಲ ಪೆಟ್ರೋಲ್, ಡಿಸೇಲ್, ಕಮರ್ಷಿಯಲ್ ಸಿಲಿಂಡರ್ ಕೊರತೆ ಬಗ್ಗೆ ಮಾತ್ರ ಚಿಂತಿಸುತ್ತಿದ್ದಾರೆ. ಆದರೆ ವೈದ್ಯಕೀಯ ಕ್ಷೇತ್ರದ ಮೇಲೆ ಉಂಟಾಗಲಿರುವ ಪರಿಣಾಮದ ಬಗ್ಗೆ ಯಾರು ಗಂಭೀರವಾಗಿಲ್ಲ. ವೈದ್ಯಕೀಯ ವಸ್ತುಗಳು ಸಿಗದಿದ್ದರೆ

ಅನೇಕರ ಜೀವಕ್ಕೆ ಅಪಾಯವಾಗುವ ಆತಂಕ ಎದುರಾಗಿದೆ.ಸದ್ಯ ಕೇಂದ್ರ ಸರ್ಕಾರ ವೈದ್ಯಕೀಯ ಕ್ಷೇತ್ರಕ್ಕೆ ಬೇಕಾದ ವಸ್ತುಗಳು ತಯಾರಾ ಗಲು ಬೇಕಾದ ಕಚ್ಚಾವಸ್ತುಗಳನ್ನು ಪೂರೈಕೆ ಮಾಡೋದರ ಬಗ್ಗೆ ಹೆಚ್ಚು ಗಮನಹರಿಸ ಬೇಕಿದೆ. ಇಲ್ಲದೇ ಇದರೆ ಭವಿಷ್ಯದಲ್ಲಿ ಆರೋಗ್ಯ ಕ್ಷೇತ್ರದ ಮೇಲೆ ಯುದ್ದದ ದುಷ್ಪರಿಣಾಮಗಳು ದೊಡ್ಡಮಟ್ಟದಲ್ಲಿ ಆಗುವ ಸಾಧ್ಯತೆಯಿದೆ.

## ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ದಿನಗೂಲಿ ನೌಕರರಿಗೆ 5 ಲಕ್ಷ ರೂ.ವರೆಗೆ ನಗದು ರಹಿತ ಆರೋಗ್ಯ ಯೋಜನೆ ಜಾರಿ.!

**ಬೆಂಗಳೂರು,ಏ.1-**ರಾಜ್ಯದ ವಿವಿಧ ಇಲಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅರ್ಹ ದಿನಗೂಲಿ ನೌಕರರು ಮತ್ತು ಅವರ ಅವಲಂಬಿತರಿಗೆ 5 ಲಕ್ಷ ರೂ.ವರೆಗಿನ ನಗದು ರಹಿತ ಆರೋಗ್ಯ ಯೋಜನೆ ವಿಸ್ತರಿಸಿ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.ಈ ಹಿಂದೆ 2025ರ ಜೂನ್ 24ರಂದು ಹೊರಡಿಸಲಾಗಿದ್ದ ಆದೇಶದನ್ವಯ, ಸುಮಾರು 3 ಲಕ್ಷ ಗುತ್ತಿಗೆ ಮತ್ತು ಹೊರಗುತ್ತಿಗೆ ಹಾಗೂ ಗೌರವ ಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಈ ಯೋಜನೆಯನ್ನು ಜಾರಿಗೊಳಿಸಲಾಗಿತ್ತು. ಈ ಸೌಲಭ್ಯವನ್ನು ತಮಗೂ ನೀಡಬೇಕೆಂದು ಕರ್ನಾಟಕ ರಾಜ್ಯ ಸರ್ಕಾರಿ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಸಂಘವು ಸರ್ಕಾರಕ್ಕೆ ಮನವಿ ಸಲ್ಲಿಸಿತ್ತು. ಈ ಮನವಿಯನ್ನು ಪುರಸ್ಕರಿಸಿರುವ ಸರ್ಕಾರ, ಎಲ್ಲಾಈ ಯೋಜನೆ ಪ್ರಕಾರ ನೌಕರರು ಮತ್ತು ಅವರ ಅವಲಂಬಿತರಿಗೆ ವಾರ್ಷಿಕ 5,00,000 ರೂ. ವರೆಗೆ ನಗದು ರಹಿತ ಚಿಕಿತ್ಸೆ ಲಭ್ಯವಿರುತ್ತದೆ. ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ದಿನಗೂಲಿ ನೌಕರರು ಮತ್ತು ಅವರ ಕುಟುಂಬದ ಸದಸ್ಯರು ಈ ಯೋಜನೆಯ ಫಲಾನುಭವಿಗಳು.

# ಜನಗಣತಿ 2027: ಸ್ವಯಂ ಗಣತಿ ಪ್ರಕ್ರಿಯೆ ಆರಂಭ



**ಮಂಗಳೂರು,ಏ.1**-ಭಾರತ ಸರ್ಕಾರದ ವತಿಯಿಂದ ನಡೆಯಲಿರುವ ಜನಗಣತಿ 2027ಕ್ಕೆ ಸಂಬಂಧಿಸಿದಂತೆ ಮಹತ್ವದ ಹಂತವಾದ ಸ್ವಯಂ ಗಣತಿ (**Self Enumeration**) ಪ್ರಕ್ರಿಯೆ ಅಧಿಕೃತವಾಗಿ ಘೋಷಿಸಲಾಗಿದೆ.

ಈ ಪ್ರಕ್ರಿಯೆ ಇಂದಿನಿಂದ ಅಂದ್ರೆ, 2026ರ ಎಪ್ರಿಲ್ 1ರಿಂದ ಎಪ್ರಿಲ್ 15ರವರೆಗೆ ನಡೆಯಲಿದ್ದು, ದೇಶದ ಪ್ರತಿಯೊಬ್ಬ ನಾಗರಿಕರೂ ತಮ್ಮ ಮನೆಯ ವಿವರಗಳನ್ನು ತಾವೇ ಆನ್‌ಲೈನ್ ಮೂಲಕ ಸಲ್ಲಿಸುವ ಅವಕಾಶವನ್ನು ಪಡೆದುಕೊಳ್ಳಬಹುದು.

ಈ ಹೊಸ ವ್ಯವಸ್ಥೆಯ ಉದ್ದೇಶ ಜನಗಣತಿಯನ್ನು ಇನ್ನಷ್ಟು ಸುಲಭ, ವೇಗವಾದ ಮತ್ತು ಪಾರದರ್ಶಕವಾಗಿ ನಡೆಸುವುದಾಗಿದೆ. ಸರ್ಕಾರದ ಮಾಹಿತಿ ಪ್ರಕಾರ, ನಾಗರಿಕರು ತಮ್ಮ ಮೊಬೈಲ್ ಫೋನ್ ಅಥವಾ ಕಂಪ್ಯೂಟರ್ ಮೂಲಕ ಅಧಿಕೃತ ವೆಬ್‌ಸೈಟ್‌ಗೆ ಲಾಗಿನ್ ಆಗಿ, ಣಖಿಕ ಮೂಲಕ ದೃಢೀಕರಣ ಮಾಡಿಕೊಂಡು, ತಮ್ಮ ಕುಟುಂಬದ ಎಲ್ಲಾ ವಿವರಗಳನ್ನು ಭರ್ತಿ ಮಾಡಬಹುದು. ಇದರಿಂದ ಮನೆಮನೆಗೆ ಭೇಟಿ ನೀಡುವ ಎಣಿಕಾಧಿಕಾರಿಗಳ ಮೇಲಿನ ಒತ್ತಡ ಕಡಿಮೆಯಾಗುವುದರ ಜೊತೆಗೆ, ಮಾಹಿತಿಯ ಶುದ್ಧತೆಯೂ ಹೆಚ್ಚುತ್ತದೆ.

ಸ್ವಯಂ ಗಣತಿಗೆ ಹೀಗೆ ಮಾಡಿ: ಸ್ವಯಂ ಗಣತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ನಾಗರಿಕರು ಕೆಲವು ಸರಳ ಹಂತಗಳನ್ನು ಅನುಸರಿಸಬೇಕಾಗುತ್ತದೆ. ಮೊದಲು, ಮೊಬೈಲ್ ಸಂಖ್ಯೆ ಹಾಗೂ ಣಖಿಕ ಬಳಸಿ ಲಾಗಿನ್ ಆಗಬೇಕು. ನಂತರ ತಮ್ಮ ವಿಳಾಸ, ಕುಟುಂಬ ಸದಸ್ಯರ ಮಾಹಿತಿ, ವಯಸ್ಸು, ಉದ್ಯೋಗ, ಶಿಕ್ಷಣ ಸೇರಿದಂತೆ ಅಗತ್ಯ ವಿವರಗಳನ್ನು ಸರಿಯಾಗಿ ನಮೂದಿಸಬೇಕು. ಎಲ್ಲಾ ವಿವರಗಳನ್ನು ಸಲ್ಲಿಸಿದ ನಂತರ, ಪ್ರತಿ ಕುಟುಂಬಕ್ಕೂ ಒಂದು ವಿಶೇಷ **SE Reference ID** ನೀಡಲಾಗುತ್ತದೆ. ಈ ಐಡಿ ಅನ್ನು ಮುಂದಿನ ಹಂತದಲ್ಲಿ ಎಣಿಕಾಧಿಕಾರಿಗಳಿಗೆ ತೋರಿಸುವುದು ಅಗತ್ಯವಾಗುತ್ತದೆ.

ಸರ್ಕಾರವು ಈ ಪ್ರಕ್ರಿಯೆಯಲ್ಲಿ ನಾಗರಿಕರ ಮಾಹಿತಿ ಸಂಪೂರ್ಣ ಸುರಕ್ಷಿತವಾಗಿರುತ್ತದೆ ಎಂದು ಭರವಸೆ ನೀಡಿದೆ. 100% ಗೌಪ್ಯತೆ ಕಾಯ್ದುಕೊಳ್ಳಲಾಗುತ್ತಿದ್ದು, ಯಾವುದೇ ಮಾಹಿತಿಯನ್ನು ದುರುಪಯೋಗಪಡಿಸಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿ ಸಲಾಗಿದೆ. ಇದೇ ವೇಳೆ, ನೀಡುವ ಎಲ್ಲಾ ಮಾಹಿತಿಯು ನಿಖರವಾಗಿರಬೇಕು ಎಂದು ನಾಗರಿಕರಿಗೆ ಸೂಚಿಸಲಾಗಿದೆ.

ಸ್ವಯಂ ಗಣತಿ ಪೂರ್ಣಗೊಂಡ ನಂತರ, ಎರಡನೇ ಹಂತವಾಗಿ 2026ರ ಎಪ್ರಿಲ್ 16ರಿಂದ ಮೇ 15ರವರೆಗೆ ಎಣಿಕಾಧಿಕಾರಿಗಳು ಮನೆಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಈ ವೇಳೆ ನಾಗರಿಕರು ತಮ್ಮ **SE Reference ID** ಅನ್ನು ತೋರಿಸಿ, ಈಗಾಗಲೇ ಸಲ್ಲಿಸಿದ ಮಾಹಿತಿಯನ್ನು ದೃಢೀಕರಿಸಬೇಕು. ಅಗತ್ಯವಿದ್ದಲ್ಲಿ, ತಿದ್ದುಪಡಿ ಮಾಡುವ ಅವಕಾಶವನ್ನೂ ನೀಡಲಾಗುತ್ತದೆ.

ತಂತ್ರಜ್ಞಾನ ಆಧಾರಿತ ಈ ಹೊಸ ಕ್ರಮವು ಜನಗಣತಿ ಪ್ರಕ್ರಿಯೆಯಲ್ಲಿ ಮಹತ್ವದ ಬದಲಾವಣೆಯನ್ನು ತರಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಇದರಿಂದ ಸಮಯದ ಉಳಿತಾಯವಾಗುವುದರ ಜೊತೆಗೆ, ಜನರ ಪಾಲ್ಗೊಳ್ಳುವಿಕೆಯೂ ಹೆಚ್ಚುವ ಸಾಧ್ಯತೆ ಇದೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲೂ ಈ ಸೇವೆಯನ್ನು ಸುಲಭವಾಗಿ ಬಳಸಲು ಸರ್ಕಾರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ನಾಗರಿಕರು ಸ್ವಯಂ ಗಣತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು **https://se.census.gov.in** ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಅಥವಾ ಕ್ಕಿ ಕೋಡ್ ಸ್ಕ್ಯಾನ್ ಮಾಡಬಹುದು. ಸರಿಯಾದ ಮಾಹಿತಿಯನ್ನು ನೀಡುವ ಮೂಲಕ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಸರ್ಕಾರ ಮನವಿ ಮಾಡಿದೆ.

ಒಟ್ಟಿನಲ್ಲಿ, ಜನಗಣತಿ 2027ರ ಸ್ವಯಂ ಗಣತಿ ಪ್ರಕ್ರಿಯೆ ನಾಗರಿಕರಿಗಾಗಿ ಸುಲಭ ಹಾಗೂ ಸುರಕ್ಷಿತ ವ್ಯವಸ್ಥೆಯನ್ನು ಒದಗಿಸುತ್ತಿದ್ದು, ಎಲ್ಲರೂ ಇದರಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಅತ್ಯಂತ ಅಗತ್ಯವಾಗಿದೆ.

# ಗಂಗಾವತಿ: ಮಹಿಳೆಯರ ಒಳ ಉಡುಪು ಕದಿಯುತ್ತಿದ್ದ ಆರೋಪಿ ಅಂದರ್..!



**ಗಂಗಾವತಿ,ಏ.1**-ಕಳ್ಳರ ರೀತಿಯಲ್ಲಿ ತಡರಾತ್ರಿ ಸಮಯದಲ್ಲಿ ಮನೆಯ ಗೋಡೆ-ಕಂಪೌಂಡ್ ಹಾರಿ ಬಂದು ಮನೆಯ ಮುಂದೆ ಒಣಗಲು ಹಾಕಿದ್ದ ಮಹಿಳೆಯರ ಒಳ ಉಡುಪುಗಳನ್ನು ಕಳ್ಳತನ ಮಾಡುತ್ತಿದ್ದ ಖದೀಮನೊಬ್ಬ ಲಾಕ್ ಆಗಿದ್ದಾನೆ.

ಇಲ್ಲಿನ ಬನ್ನಿಗಿಡದ ಕ್ಯಾಂಪಿನ ಪ್ರತಿಷ್ಠಿತರ ಮನೆಗಳಿಗೆ ರಾತ್ರಿ ವೇಳೆ ಕಳ್ಳರಂತೆ ಬಂದು ಕಳೆದ ಮೂರ್ನಾಲ್ಕು ದಿನಗಳಿಂದ ಸತತವಾಗಿ ಮಹಿಳೆಯರ ಒಳ ಉಡುಪುಗಳನ್ನು ಕದ್ದುಕೊಂಡು ಹೋಗಿ ಜನರ ಕೈಗೆ ಸಿಗದೇ ಚಳ್ಳೆಹಣ್ಣು ತಿನ್ನಿಸುತ್ತಿದ್ದ ವಿಕೃತ ಮನಸ್ಸಿನ ವ್ಯಕ್ತಿ ಈಗ ರೆಡ್‌ಹ್ಯಾಂಡ್ ಆಗಿ ಸಿಕ್ಕುಬಿದ್ದಿದ್ದಾನೆ.

ಬಂಧಿತ ಆರೋಪಿಯನ್ನು ಎಪಿಎಂಸಿಯ ಹಮಾಲರ ಕಾಲೋನಿಯ ದಾದಾಸಾಬ್ ಯಮನೂರ ಸಾಬ ಎಂದು ಗುರುತಿಸಲಾಗಿದೆ. 22 ವರ್ಷದ ಈ ಯುವಕ, ಮನೆಗಳಿಗೆ ನುಗ್ಗಿ ಬಟ್ಟೆ ಕಳ್ಳತನ ಮಾಡುತ್ತಿರುವ ಕೃತ್ಯ ಮನೆಗಳಲ್ಲಿ ಅಳವಡಿಸಿದ್ದ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿತ್ತು.

ಈ ಬಗ್ಗೆ ಪೊಲೀಸರ ಗಮನಕ್ಕೆ ಬರುತಿದ್ದಂತೆ ಆರೋಪಿಯ ಶೋಧ ಕಾರ್ಯದಲ್ಲಿ ತೊಡಗಿದ್ದರು. ಆದರೆ, ಸೋಮವಾರ ತಡರಾತ್ರಿ ಮತ್ತೆ ಗಣ್ಯ ವ್ಯಕ್ತಿಯೊಬ್ಬರ ಮನೆಗೆ ನುಗ್ಗಿದ ಈ ಯುವಕನನ್ನು ಮನೆಯವರು ರೆಡ್‌ಹ್ಯಾಂಡ್ ಆಗಿ ಹಿಡಿದು ಪೊಲೀಸರಿಗೆ ಕೊಟ್ಟಿದ್ದಾರೆ.

ಪೊಲೀಸರ ವಿಚಾರಣೆಯ ಸಂದರ್ಭದಲ್ಲಿ ಈ ಬಗ್ಗೆ ಯಾವುದೂ ಬಾಯ್ಬಿಡದ ಯುವಕ, ಬಳಿಕ ತನ್ನ ತಲೆ ಸರಿಯಿಲ್ಲ, ಏಟು ಬಿದ್ದು ಮಾನಸಿಕ ಅಸ್ವಸ್ಥನಾಗಿದ್ದಕ್ಕೆ ಹೀಗೆ ಮಾಡಿದ್ದೇನೆ ಎಂದು ತಪ್ಪೊಪ್ಪಿಕೊಂಡಿದ್ದಾನೆ ಎಂದು ಗೊತ್ತಾಗಿದೆ.

ಯುವಕನ ಮೇಲೆ ದೂರು ದಾಖಲಿಸಿಕೊಂಡು, ನ್ಯಾಯಾಂಗದ ವಶಕ್ಕೆ ನೀಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇತ್ತೀಚೆಗೆ ಬೆಂಗಳೂರಿನಲ್ಲೂ ಇಂತಹದ್ದೇ ಘಟನೆ ನಡೆದಿತ್ತು. ಮನೆ ಅಂಗಳದಲ್ಲಿ ಒಣಗಲು ಹಾಕಿದ್ದ ಮಹಿಳೆಯರ ಒಳ ಉಡುಪುಗಳನ್ನು ಕದ್ದು, ಸಾರ್ವಜನಿಕವಾಗಿ ಪ್ರದರ್ಶಿಸಿ ಗೌರವಕ್ಕೆ ಧಕ್ಕೆ ತಂದ ಆರೋಪದಡಿ ಅಮಲ್ (23) ಎಂಬ ವಿಕೃತ ಕಾಮುಕನನ್ನು ಹೆಬ್ಬಗೋಡಿ ಪೊಲೀಸರು ಬಂಧಿಸಿದ್ದರು. ಕೇರಳದ ಈತ ಕಳೆದ ಆರು ತಿಂಗಳ ಹಿಂದೆ ನಗರಕ್ಕೆ ಬಂದಿದ್ದ. ಸ್ನೇಹಿತನ ರೂಮಿನಲ್ಲಿ ವಾಸವಾಗಿದ್ದ. ಡಿಪ್ಲೋಮಾ ಇಂಜಿನಿಯರ್ ವ್ಯಾಸಂಗ ಮಾಡಿದ್ದು, ಯಾವುದೇ ಕೆಲಸಕ್ಕೆ ಹೋಗುತ್ತಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದರು. ಜ.19ರಂದು ಹೆಬ್ಬಗೋಡಿ ವಿದ್ಯಾನಗರದಲ್ಲಿ ಕಟ್ಟಡಗಳ ಮೇಲೆ ಹಾಗೂ ಮನೆಯಂಗಳದಲ್ಲಿ ಒಣಗಲು ಹಾಕಿದ್ದ ಮಹಿಳೆಯರ ಒಳ ಉಡುಪುಗಳನ್ನು ಕದ್ದು, ಫೋಟೋ ತೆಗೆದುಕೊಂಡು ಸಾರ್ವಜನಿಕವಾಗಿ ಪ್ರದರ್ಶಿಸಿದ್ದ. ಈ ಮಾಹಿತಿ ಆಧರಿಸಿ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಿದ್ದರ ಬಗ್ಗೆಯೂ ಪೊಲೀಸರು ಮಾಹಿತಿ ನೀಡಿದ್ದರು. ಆರೋಪಿಯ ಮನೆಗೆ ಹೋಗಿ ಪರಿಶೀಲಿಸಿದಾಗ ಮಹಿಳೆಯರ 17 ಒಳಉಡುಪುಗಳನ್ನು ಸಂಗ್ರಹಿಸಿರುವುದನ್ನು ಪೊಲೀಸರು ಪತ್ತೆ ಹಚಿದ್ದರು. ಕದ್ದ ಬಟ್ಟೆಗಳನ್ನು ಧರಿಸಿ ಫೋಟೊ ತೆಗೆದುಕೊಳ್ಳುವುದಲ್ಲದೇ ಸಾರ್ವಜನಿಕವಾಗಿ ಪ್ರದರ್ಶಿಸುತ್ತಿದ್ದ. ಈ ಮೂಲಕ ಮಹಿಳೆಯರ ಗೌರವ ಹಾಗೂ ಮಾನಕ್ಕೆ ಧಕ್ಕೆ ತರುತ್ತಿದ್ದ. ಆರೋಪಿಯನ್ನು ಬಂಧಿಸಿ ವಿಚಾರಣೆಗೊಳಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು.

# ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪ ಪರ ಇಬ್ಬರು ಮಾಜಿ ಸಿಎಂಗಳಿಂದ ಭರ್ಜರಿ ಪ್ರಚಾರ



**ದಾವಣಗೆರೆ,ಏ.1**-ಜಿಲ್ಲೆಯ ದಕ್ಷಿಣ ಮತ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪ ಅವರ ಪರ ಜೋಡೆತ್ತಿನಂತೆ ಬಿ.ಎಸ್. ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ ಇಬ್ಬರು ಮತಭೇಟೆಗೆ ಇಳಿದರು.

ಮಾಜಿ ಸಿಎಂಗಳಾದ ಬಿ.ಎಸ್. ಯಡಿಯೂರಪ್ಪ ಹಾಗೂ ಬಸವರಾಜ್ ಬೊಮ್ಮಾಯಿ ರ್‍ಯಾಲಿ ಮುಖಾಂತರ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪರಿಗೆ ಮತ ನೀಡುವಂತೆ ಮತದಾರರಿಗೆ ಮನವಿ ಮಾಡಿದರು. ದಾವಣಗೆರೆ ನಗರದ ಬಸವರಾಜ್ ಪೇಟೆಯಿಂದ ಶುರುವಾದ ರ್‍ಯಾಲಿಯಲ್ಲಿ ನೂರಾರು ಕಾರ್ಯಕರ್ತರು ಭಾಗಿಯಾಗಿ ಮಾಜಿ ಸಿಎಂಗಳಿಬ್ಬರಿಗೂ ಶಕ್ತಿ ತುಂಬಿದಲ್ಲದೆ, ಸೇಬಿನ ಹಾರ ಹಾಕಿ ಸನ್ಮಾನ ಮಾಡಿದರು. ಈ ಬಾರಿ ಬಿಜೆಪಿ ಗೆಲ್ಲಿಸುವಂತೆ ಮಾಜಿ ಸಿಎಂಗಳಿಬ್ಬರು ಮನವಿ ಮಾಡಿಕೊಂಡರು. ಬಿಸಿಲು ಲೆಕ್ಕಿಸದೆ ತೆರೆದ ವಾಹನದಲ್ಲಿ ಮತಯಾಚನೆ ಮಾಡಿದರು.

ಆರ್ಯ ವೈಶ್ಯ ಸಮಾಜದ ಸಂಘದಲ್ಲಿ ಪ್ರಚಾರ ಸಭೆ: ಮಾಜ್ ಸಿಎಂ ಯಡಿಯೂರಪ್ಪ ಅವರು ಆರ್ಯ ವೈಶ್ಯ ಸಮಾಜದ ಸಂಘದಲ್ಲಿ ಪ್ರಚಾರ ಸಭೆ ಮಾಡಿದರು. ದಾವಣಗೆರೆ ನಗರದ ಡಿಸಿಎಂ ಟೌನ್‌ಶಿಪ್‌ನಲ್ಲಿರುವ ವಾಸವಿ ಕಲ್ಯಾಣ ಮಂಡಲದಲ್ಲಿ ನಡೆಯುತ್ತಿರುವ ಪ್ರಚಾರ ಸಭೆಯಲ್ಲಿ ಸಾಕಷ್ಟು ಜನ ಮತದಾರರು ಭಾಗಿಯಾಗಿದ್ದರು. ಸಭೆಯಲ್ಲಿ ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ, ಮಾಜಿ ಸಚಿವ ಸಿಸಿ ಪಾಟೀಲ್, ಮಾಜಿ ಸಂಸದ ಜಿಎಂ ಸಿದ್ದೇಶ್ವರ್ ಸೇರಿದಂತೆ ಹಲವು ನಾಯಕರು ಭಾಗಿಯಾಗಿದ್ದರು.

ಬಿ.ಎಸ್. ಯಡಿಯೂರಪ್ಪ ಅವರು ಮಾತನಾಡಿ, ಬಿಜೆಪಿಗೆ ಹಾಗೂ ಆರ್ಯವೈಶ್ಯ ಸಮಾಜಕ್ಕೆ ಅವಿನಾಭಾವ ಸಂಬಂಧ ಇದೆ. ಚುನಾವಣೆಯಲ್ಲಿ ಬಿಜೆಪಿಗೆ ಮತ ನೀಡಿ ಗೆಲ್ಲಿಸಬೇಕಿದೆ. ಈ ಚುನಾವಣೆ ಹಣದಿಂದ ಗೆಲ್ಲಬಹುದು ಎಂದು ಕಾಂಗ್ರೆಸ್‌ನವರು ಅಂದುಕೊಂಡಿದ್ದಾರೆ. ಅವರಿಗೆ ತಕ್ಕ ಉತ್ತರ ಈ ಚುನಾವಣೆಯಲ್ಲಿ ಕೊಡಬೇಕಿದೆ. ಆದ್ದರಿಂದ ನಮ್ಮ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪ ಅವರಿಗೆ ಮತ ನೀಡುವಂತೆ ಬಿಎಸ್‌ವೈ ಮನವಿ ಮಾಡಿದರು.

ಬಸವರಾಜ್ ಬೊಮ್ಮಾಯಿ ಭಾಷಣ: ಆರ್ಯವೈಶ್ಯ ಸಮಾಜದಿಂದ ಹಮ್ಮಿಕೊಂಡ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಷಣ ಮಾಡಿದ ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಬಳಕೆ ಮಾಡಬೇಕಾದ ಹಣ ಲೂಟಿ ಮಾಡಿದ್ದಾರೆ. ಎಸ್ಸಿಎಸ್ಟಿ ಸಮುದಾಯದ ಅಭಿವೃದ್ಧಿ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ. ಸಿಎಂ ಅಧೀನದಲ್ಲೇ ಇಷ್ಟೆಲ್ಲ ಭ್ರಷ್ಟಾಚಾರ ನಡೆದರೂ ಮೌನಂ ಸಮ್ಮತಿ ಲಕ್ಷಣಂ ಎನ್ನುವಂತೆ ಸುಮ್ಮನಿದ್ದಾರೆ. ನಮ್ಮದು ರಾಜಕೀಯವಾಗಿ ಹಾಗೂ ಆರ್ಥಿಕವಾಗಿ ಭದ್ರತೆಯಿಂದ ಸರ್ಕಾರ ಇದೆ ಎಂದು ಸಿಎಂ ಹೇಳುತ್ತಾರೆ. ಆದರೆ ಆರ್ಥಿಕವಾಗಿ ದುರ್ಬಲರಾಗಿದ್ದಾರೆ, ಖುರ್ಚಿ ಕಿತ್ತಾಟ ನಡೆಯುತ್ತಲೇ ಇದೆ. ಈಗ ಉಪಚುನಾವಣೆ, ಬೇರೆ ರಾಜ್ಯದ ಚುನಾವಣೆ ಇರುವುದರಿಂದ ಅಲ್ಪವಿರಾಮ ಘೋಷಣೆ ಮಾಡಿದ್ದಾರೆ. ಮೇ ತಿಂಗಳಲ್ಲಿ ಖುರ್ಚಿಗಾಗಿ ಜಂಗಿ ನಿಖಾಲಿ ಕುಸ್ತಿ ಇದೆ ಕಾದು ನೋಡಿ. ಕಾಂಗ್ರೆಸ್‌ನಲ್ಲಿ ಇದ್ದ ಸಾದಿಕ್ ಪೈಲ್ವಾನ್ ಎರಡು ದಿನ ಹವಾ ಮಾಡಿದೆ. ಆದರೆ ಕುಸ್ತಿ ಅಖಾಡಕ್ಕೆ ಇಳಿದು ಕುಸ್ತಿಯಾಡದೆ ಜಗಿದು ಕಣದಿಂದ ಹೊರ ಬಂದಿದ್ದಾನೆ. ಆದರೆ ನಮ್ಮಲ್ಲಿ ಇರುವ ಪೈಲ್ವಾನ್ ಅಖಾಡದಲ್ಲಿ ಇರುತ್ತಾನೆ, ಕುಸ್ತಿಯಾಡಿ ಗೆಲ್ಲುತ್ತಾನೆ ಎಂದು ಶ್ರೀನಿವಾಸ್ ದಾಸಕರಿಯಪ್ಪ ಪರ ಮತಯಾಚನೆ ಮಾಡಿದರು.

# ಅಗತ್ಯ ಔಷಧಿಗಳ ಬೆಲೆ ಏರಿಸುವ ಮೂಲಕ ಕನ್ನಡಿಗರ ಲೂಟಿ ಮಾಡುತ್ತಿರುವ ಕೇಂದ್ರ ಸರ್ಕಾರ: ರಣದೀಪ್ ಸುರ್ಜೇವಾಲಾ



**ಬೆಂಗಳೂರು,ಏ.1**-ಏಪ್ರಿಲ್ 1 ರಿಂದ ಟೋಲ್, ಔಷಧ ಸೇರಿದಂತೆ ಕೆಲವು ವಸ್ತುಗಳ ಬೆಲೆ ಏರಿಕೆ ಆಗಲಿದ್ದು, ಕೇಂದ್ರದ ಬಿಜೆಪಿ ಸರ್ಕಾರ ಜನರನ್ನು ಲೂಟಿ ಮಾಡಲು ಹೊರಟಿದೆ ಎಂದು ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ವಾಗ್ದಾಳಿ ನಡೆಸಿದರು.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬೆಲೆ ಏರಿಕೆ ಮಾಡಿ ಜನರ ಜೀವನ ಕಸಿಯಲಿದೆ ಎಂದು ಆರೋಪಿಸಿದ್ದಾರೆ. ಮಧುಮೇಹ, ಅಧಿಕ ರಕ್ತದೊತ್ತಡ ಮತ್ತು ಸಾಂಕ್ರಾಮಿಕ ರೋಗಗಳು ಸೇರಿದಂತೆ 900 ಅಗತ್ಯ ಔಷಧಿಗಳ ಬೆಲೆಗಳನ್ನು ಹೆಚ್ಚಿಸಲಾಗಿದೆ.

ಮೋದಿ ಸರ್ಕಾರ ಮತ್ತು ರಾಷ್ಟ್ರೀಯ ಔಷಧ ಬೆಲೆ ಪ್ರಾಧಿಕಾರ (ಎನ್‌ಪಿಪಿಎ) ಐಸಿಯುಗಳಲ್ಲಿ ಬಳಸುವ ಮಧುಮೇಹ ಮತ್ತು ರೋಗನಿರೋಧಕ ಮೆರೊಫೆನ್ 500 ಖಖ ಸೇರಿದಂತೆ 31 ಔಷಧಿಗಳ ಬೆಲೆಗಳನ್ನು ಹೆಚ್ಚಿಸುತ್ತಿದೆ. ಅಗತ್ಯ ಔಷಧಿಗಳ ಮೇಲೆ ಜಿಎಸ್‌ಟಿ ವಿನಾಯಿತಿ ನೀಡಬೇಕೆಂಬ ಬೇಡಿಕೆಯ ಹೊರತಾಗಿಯೂ ಅದು ಶೇ. 12 ರಷ್ಟು ಜಿಎಸ್‌ಟಿ ವಿಧಿಸಿದೆ ಎಂದು ಆರೋಪಿಸಿದ್ದಾರೆ.

ಮಾರ್ಚ್ 2026 ರಿಂದ ಪ್ಲಾಸ್ಟಿಕ್ ಸರಕು ಸಾಮಾಗ್ರಿಗಳ ಬೆಲೆಗಳು ಶೇ. 50 ಹೆಚ್ಚಾಗಿದೆ. ಮಾರ್ಚ್ 25 ರಂದು, ಇಂಡಿಯನ್ ಆಯಿಲ್ ಕಾರ್ಪೊರೇಷನ್ ಪಾಲಿಥಿಲೀನ್ ಬೆಲೆಯನ್ನು ಪ್ರತಿ ಟನ್‌ಗೆ 7,000 ರೂ.ಗಳಷ್ಟು ಹೆಚ್ಚಿಸಿದೆ. ಡಾಂಬರಿಗೆ ಬಳಸುವ ಪಾಲಿಪ್ರೊಪಿಲೀನ್ ಬಿಟುಮೆನ್ ಬೆಲೆ ಮಾರ್ಚ್ 2026 ರಲ್ಲಿ ಪ್ರತಿ ಟನ್‌ಗೆ 45,000 ರೂ.ಗಳಿಂದ 65,000 ರೂ.ಗಳಿಗೆ ಏರಿದೆ ಎಂದು ಅವರು ವಿವರಿಸಿದರು.

2026 ರ ಏಪ್ರಿಲ್‌ನಲ್ಲಿ ಸಿಮೆಂಟ್ ಬೆಲೆ ಪ್ರತಿ ಚೀಲಕ್ಕೆ 50-100 ರೂ.ಗಳಷ್ಟು ಹೆಚ್ಚಾಗುವ ಅಂದಾಜಿದೆ. ದೇಶದ ಸಿಮೆಂಟ್ ವಲಯವು ಅದಾನಿ ನಿಯಂತ್ರಣದಲ್ಲಿದೆ. ಹೀಗಾಗಿ ಅದರ ಬೆಲೆ ಮತ್ತಷ್ಟು ಹೆಚ್ಚಾಗಬಹುದು. ಕಬ್ಬಿಣದ ಬೆಲೆಗಳು ಸಹ ಇದೇ ರೀತಿಯಲ್ಲಿ ಏರುತ್ತಿವೆ, ಆದರೆ ಮೋದಿ ಸರ್ಕಾರವು ಮೂಕ ಪ್ರೇಕ್ಷಕನಾಗಿಯೇ ಉಳಿದಿದೆ ಎಂದು ಅವರು ಆರೋಪಿಸಿದರು.

ಮಾರ್ಚ್ ಮತ್ತು ಏಪ್ರಿಲ್‌ನಲ್ಲಿ ವಿಮಾನ ದರಗಳು ಶೇ. 10-15 ರಷ್ಟು ಹೆಚ್ಚಾಗಿದ್ದು, ಏರ್ ಇಂಡಿಯಾ ಮತ್ತು ಇಂಡಿಗೊ ಇಂಧನ ಸರ್‌ಚಾರ್ಜ್ ವಿಧಿಸಿವೆ ಎಂದು ಅವರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಕೇಂದ್ರವು ಕನ್ನಡಿಗರನ್ನು ಲೂಟಿ ಮಾಡುತ್ತಿರುವುದಕ್ಕೆ ಉತ್ತಮ ಉದಾಹರಣೆಯೆಂದರೆ, 2023 ರಿಂದ ಇಲ್ಲಿಯವರೆಗೆ ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ 900 ಕೋಟಿ ರೂ.ಗಳಷ್ಟು ಸಂಗ್ರಹವಾಗಿದೆ. ಈ ಮೊತ್ತವು ಏಪ್ರಿಲ್ 1 ರಿಂದ ಹೆಚ್ಚಾಗುತ್ತದೆ ರಣದೀಪ್ ಸಿಂಗ್ ಸುರ್ಜೆವಾಲ ಆರೋಪಿಸಿದರು.2019-20 ರಿಂದ ಮೋದಿ ಸರ್ಕಾರವು ಟೋಲ್ ಹೆಚ್ಚಳ ಮತ್ತು ಟೋಲ್ ತೆರಿಗೆಯ ಮೂಲಕ 23,000 ಕೋಟಿ ರೂ.ಗಳಷ್ಟು ಸಂಗ್ರಹಿಸಿದೆ ಎಂದು ಅವರು ಹೇಳಿದರು. ಏಪ್ರಿಲ್ 1 ರಿಂದ ಕೇಂದ್ರವು ಟೋಲ್ ತೆರಿಗೆಯನ್ನು ಶೇ. 5 ರಷ್ಟು ಏರಿಕೆ ಮಾಡುತ್ತಿದ್ದು, ಇದು 250 ಕೋಟಿ ರೂಪಾಯಿಗಳ ಹೆಚ್ಚುವರಿ ಹೊರೆಯನ್ನು ಹೇರಲಿದೆ.

ಕೇಂದ್ರವು ಸ್ಪೀಡ್ ಪೋಸ್ಟ್ ದರವನ್ನು ಶೇ. 34 ರಷ್ಟು ಹೆಚ್ಚಿಸಿದೆ, ಇದು ಇಂಡಿಯಾ ಪೋಸ್ಟ್ ಮೂಲಕ ಸಣ್ಣ ವಸ್ತುಗಳು ಅಥವಾ ದಾಖಲೆಗಳನ್ನು ಕಳುಹಿಸುವುದನ್ನು ದುಬಾರಿಯನ್ನಾಗಿ ಮಾಡುತ್ತದೆ ಎಂದು ಅವರು ಹೇಳಿದರು. ಮತ ಕೇಳುವ ಮೊದಲು, ಪ್ರಧಾನಿ ಮತ್ತು ಪ್ರತಿಯೊಬ್ಬ ಬಿಜೆಪಿ ನಾಯಕರು ಬೆಲೆ ಏರಿಕೆಗೆ ಉತ್ತರಿಸಬೇಕು ಎಂದು ಆಗ್ರಹಿಸಿದ್ದಾರೆ.

# ದಾವಣಗೆರೆ ದಕ್ಷಿಣ ಉಪ ಚುನಾವಣೆ ಕಾಂಗ್ರೆಸ್-ಬಿಜೆಪಿ ನಾಯಕರಿಂದ ಭರ್ಜರಿ ಪ್ರಚಾರ

**ದಾವಣಗೆರೆ,ಏ.1**-ದಾವಣಗರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ರಂಗೇರಿದೆ. ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರು ತಮ್ಮ ಅಭ್ಯರ್ಥಿಗಳ ಪರ ಅಬ್ಬರದ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಮಂಗಳವಾರ ದಿನವಿಡೀ ಕೈ-ಕಮಲದ ಕಲಿಗಳು ಕ್ಷೇತ್ರದ ವಿವಿಧೆಡೆ ತೆರಳಿ ಮತಯಾಚನೆ ಮಾಡಿದರು.

ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಪರ ಡಿಸಿಎಂ ಡಿ.ಕೆ. ಶಿವಕುಮಾರ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್, ಚೆಲುವರಾಯಸ್ವಾಮಿ, ಶಾಸಕ ಶಿವಲಿಂಗೇಗೌಡ ಸೇರಿದಂತೆ ಹಲವರು ಕಣಕ್ಕಿಳಿದು ಪ್ರಚಾರ ನಡೆಸಿದರೆ, ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪ ಪರ ಪ್ರತಿಪಕ್ಷದ ನಾಯಕ ಆರ್ ಅಶೋಕ್, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಎಂ ಪಿ ರೇಣುಕಾಚಾರ್ಯ, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್ ಸೇರಿದಂತೆ ಹಲವರು ಮತಯಾ ಚನೆ ಮಾಡಿದರು.

ಉಪಚುನಾವಣೆ ಯುದ್ಧ ಇದ್ದಂತೆ: ಕರ್ನಾ ಟಕದಲ್ಲಿ ನಡೆಯುತ್ತಿರುವ ಈ ಎರಡು ಉಪ ಚುನಾವಣೆಗಳು ಒಂದು ರೀತಿ ಯುದ್ಧ ಹಾಗೂ ಹೋರಾಟ ಇದ್ದಂತೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಬಣ್ಣಿಸಿದರು.

ಸಾದಿಕ್ ಪೈಲ್ವಾನ್ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರ ಮನವಿಗೆ ಬೆಲೆ ನೀಡಿ ಸಾದಿಕ್ ಪೈಲ್ವಾನ್ ಚುನಾವಣಾ ಸ್ಪರ್ಧೆಯಿಂದ ನಿವೃತ್ತಿ ತೆಗೆದುಕೊಂಡಿರುವುದು ಖುಷಿ ವಿಚಾರ. ಕೆಲ ಬಾರಿ ಕೆಲವು ವ್ಯತ್ಯಾಸಗಳಾಗುತ್ತವೆ. ಆದ್ದರಿಂದ ಅವರೊಂದಿಗೆ ಕುಳಿತು ಮಾತನಾಡಿದ್ದೇವೆ. ನಮ್ಮ ಬಳಿ ಸಾದಿಕ್ ಪೈಲ್ವಾನ್ ತಮ್ಮ ನಿರ್ಣಯ ಹೇಳಿಕೊಂಡಿದ್ದಾರೆ ಎಂದರು.

ಕರ್ನಾಟಕದ ಈ ಉಪ ಚುನಾವಣೆಗಳು, ಒಂದು ರೀತಿ ಯುದ್ಧ ಹಾಗೂ ಹೋರಾಟ ಇದ್ದಂತೆ. ಇದು ವ್ಯಕ್ತಿಗಳ್ ಮಧ್ಯೆ ನಡೆಯುತ್ತಿಲ್ಲ, ಬದಲಾಗಿ ವಿಚಾರಗಳ ನಡುವೆ ನಡೆಯುತ್ತಿದೆ. ರಾಜ್ಯದಲ್ಲಿ ನಮ್ಮ ಸರ್ಕಾರ ಬಂದ ಬಳಿಕ ಗ್ಯಾರಂಟಿ ಕೊಟ್ಟಿದ್ದೇವೆ. ರಾಜ್ಯದ ಆರೂವರೆ ಕೋಟಿ ಕನ್ನಡಿಗರು ಸರ್ಕಾರದ ಮಾಲೀಕರು ಇದ್ದಂತೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಜನರ ಜೇಬಿಗೆ ಕತ್ತರಿ ಹಾಕಿ, ಹಣ ಲೂಟಿ ಮಾಡುತ್ತಿದೆ ಎಂದು ಆರೋಪಿಸಿದರು.

ಬಿಸ್ಮಿಲ್ಲಾ ಲೇಔಟ್‌ನಲ್ಲಿರುವ ತಂಜೀಮುಲ್ ಮುಸ್ಲಿಮೀನ್ ಫಂಡ್ ಅಸೋಸಿಯೇಷನ್ ಮಾಜಿ ಅಧ್ಯಕ್ಷ ದಾದು ಸೇಠ್ ಅವರ ಮನೆಗೆ ಭೇಟಿ ನೀಡಿದ ಡಿಸಿಎಂ ಡಿಕೆ ಶಿವಕುಮಾರ್, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಮರ್ಥ್ ಶಾಮನೂರು ಅವರನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಈಗಾಗಲೇ ಎರಡು ಸಭೆಗಳನ್ನು ಮುಗಿಸಿದ್ದೇನೆ. ಬಿಜೆಪಿಯಿಂದ 160 ಜನ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಸ್ಥಳೀಯರೆಲ್ಲರೂ ಬಹಳಷ್ಟು ಉತ್ಸಾಹದಿಂದ ದುಡಿಯುತ್ತಿದ್ದಾರೆ. ಒಳ ಮೀಸಲಾತಿ ಬಗ್ಗೆ ನಾವು ಮಾತು ಕೊಟ್ಟಿದ್ದೇವೆ. ಆದರೆ, ಬಿಜೆಪಿಯವರು ಒಳ ಮೀಸಲಾತಿ ಮಾಡಲಿಲ್ಲ. ನೀತಿ ಸಂಹಿತೆ ಮುಗಿದ ಮೇಲೆ ಸಭೆ ನಡೆಸಿ ಮಾಡುತ್ತೇವೆ. ಎಡಗೈ ಸಮುದಾಯದ ಬಹು ವರ್ಷದ ಕನಸನ್ನು ಕಾಂಗ್ರೆಸ್ ಪೂರೈಸಲಿದೆ ಎಂದರು.

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮಾತನಾಡಿ, ಸಮರ್ಥ್ ಅವರನ್ನು ಹೇಗೆ ಗೆಲ್ಲಿಸಬೇಕು ಎಂಬುದರ ಬಗ್ಗೆ ಸಭೆಯಲ್ಲಿ ಚರ್ಚೆ ಆಗಿದೆ. ಎಷ್ಟು ಮತಗಳಿಂದ ಗೆಲ್ಲಿಸಬೇಕು, ಮತದಾರನನ್ನು ಯಾವ ರೀತಿ ಸೆಳೆಯಬೇಕು ಎಂದೂ ಚರ್ಚೆ ಆಗಿದೆ. ಜಮೀರ್ ಅಣ್ಣನವರು ಸಮಾಜದ ಮುಖಂಡರು. ಅವರು ಕೇರಳಕ್ಕೆ ಹೋಗಿದ್ದು, ಎರಡು ದಿನಗಳಲ್ಲಿ ವಾಪಸ್ ಬರಲಿದ್ದಾರ್. ಅವರಿಗೆ ಕರೆ ಮಾಡಿ ಮಾತನಾಡಿದ್ದು, ಅವರು ಎರಡೂ ಕ್ಷೇತ್ರಕ್ಕೂ ಬರಲಿದ್ದಾರೆ ಎಂದು ತಿಳಿಸಿದರು.

ಚಲುವರಾಯಸ್ವಾಮಿ ಕಿಡಿ: ಸಚಿವ ಚಲುವರಾ ಯಸ್ವಾಮಿ ಮಾತನಾಡಿ, ಒಳ ಮೀಸಲಾತಿ ಬಗ್ಗೆ ಬಿಜೆಪಿಗೆ ಏನಿದೆ ರೈಟ್ಸ್? ಈವರೆಗೂ ಕನಿಷ್ಠ ಗಮನ ಹರಿಸಿಲ್ಲ. ಎಲ್ಲ ಸಮುದಾಯಕ್ಕೂ ನ್ಯಾಯ ಕೊಡಲು ಮುಂದಾಗಿದ್ದೇವೆ. ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಿ ನೂರಕ್ಕೆ ನೂರು ನ್ಯಾಯ ಕೊಡಿಸುತ್ತೇವೆ. ನಮ್ಮ ಮೇಲೆ ನಂಬಿಕೆ ಇಡಿ. ಎಡಗೈಗೂ ಲಾಸ್ ಇಲ್ಲ, ಬಲಗೈಗೂ ಲಾಸ್ ಇಲ್ಲ ಎಂದು ಸ್ಪಷ್ಟನೆ ನೀಡಿದರು.

ಭ್ರಷ್ಟ ಸರ್ಕಾರಕ್ಕೆ ತಕ್ಕ ಪಾಠ ಕಲಿಸಲಿ: ನಂಬಿಕೆ ದ್ರೋಹಕ್ಕೆ ಮತ್ತೊಂದು ಹೆಸರೇ ಸಿದ್ದರಾಮಯ್ಯ. ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಭ್ರಷ್ಟತೆಯಲ್ಲಿ ಮುಳುಗಿದ್ದು, ಜನರು ಈ ಉಪ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲೇಬೇಕೆಂದು ಮಾಜಿ ಸಿಎಂ ಯಡಿಯೂರಪ್ಪ ವಾಗ್ದಾಳಿ ನಡೆಸಿದರು.

ಪಕ್ಷದ ಅಭ್ಯರ್ಥಿ ಪರವಾಗಿ ಪ್ರಚಾರಕ್ಕೆ ದಾವಣ ಗೆರೆಗೆ ಆಗಮಿಸಿದ್ದ ವೇಳೆ ಮಾತನಾಡಿದ ಅವರು, ಗ್ಯಾರಂಟಿ ಹೆಸರಿನಲ್ಲಿ ಅಭಿವೃದ್ಧಿ ಸಂಪೂರ್ಣ ಸ್ಥಗಿತವಾಗಿದೆ. ಕುರ್ಚಿ ಕಿತ್ತಾಟ, ಭ್ರಷ್ಟಾಚಾರ ಅತಿ ದೊಡ್ಡ ಮೂರು ವರ್ಷದ ಸಾಧನೆ ಇವರದ್ದಾಗಿದೆ. ರಸ್ತೆ ಅಭಿವೃದ್ಧಿಯಾಗಿಲ್ಲ, ಸರಿಯಾಗಿ ಕರೆಂಟ್ ಪೂರೈಕೆ ಇಲ್ಲ, ಕಿಸಾನ್ ಸನ್ಮಾನ್ ಯೋಜನೆಯನ್ನು ಕಿತ್ತುಕೊಂಡಿದ್ದೇ ದೊಡ್ಡ ಸಾಧನೆ. ಎಸ್ಸಿಪಿ-ಟಿಎಸ್ಪಿ ಹಣವನ್ನು ಗ್ಯಾರಂಟಿಗೆ ಬಳಸಿ ದಲಿತರಿಗೆ ಅನ್ಯಾಯ ಮಾಡಿದೆ. ವಾಲ್ಮೀಕಿ ನಿಗಮದ ಹಣದಲ್ಲಿ ತೆಲಂಗಾಣ ಚುನಾವಣೆ ಮಾಡಿದೆ. ಕಮಿಷನ್, ವರ್ಗಾವಣೆ ದಂಧೆ ಮಿತಿ ಮೀರಿದೆ. ರಾಜ್ಯದ ಜನರು ಭ್ರಷ್ಟ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ನೀಡಲಿದ್ದಾರೆ. ಈ ಉಪ ಚುನಾವಣೆ 2028ರ ಚುನಾವಣೆಯ ದಿಕ್ಸೂಚಿ. ಸ್ಮಾರ್ಟ್ ಸಿಟಿ ಯೋಜನೆಯಿಂದ ದಾವಣಗೆರೆ ದಕ್ಷಿಣ ಅಭಿವೃದ್ಧಿಯಾಗಿದೆ. ಉಪಚುನಾವಣೆಯಲ್ಲಿ ಬಿಜೆಪಿ ಗೆದ್ದು, ಕಾಂಗ್ರೆಸ್‌ನ ಪತನ ದಾವಣಗೆರೆಯಿಂದಲೇ ಶುರುವಾಗಲಿದೆ. ಭ್ರಷ್ಟಾಚಾರದ ಸರ್ಕಾರಕ್ಕೆ ಮತ ಹಾಕದಂತೆ ನಮ್ಮ ಮನವಿ. ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪಗೆ ಮತ ನೀಡುವಂತೆ ಅವರು ಮನವಿ ಮಾಡಿದರು.

ಸಂಸದ ಬಸವರಾಜ ಬೊಮ್ಮಾಯಿ ಮಾತನಾ ಡಿ, ಸಿದ್ದರಾಮಯ್ಯ ಸರ್ಕಾರ ಟ್ಯಾಕ್ಸ್ ಟೆರರಿಸಂ ಮಾಡುತ್ತಿದೆ. ಹೊಸ ಹೊಸ ತೆರಿಗೆಗಳನ್ನು ಹಾಕಿ ಜನರಿಂದ ಹಣ ಲೂಟಿ ಮಾಡುತ್ತಿದೆ. ಸಾಲವನ್ನು ಮಾಡಿ ಸಾಲದ ದಾಖಲೆ ಸಿದ್ದರಾಮಯ್ಯ ಎಂದು ಹೆಸರು ಪಡೆದುಕೊಂಡಿದ್ದಾರೆ. ಈ ಸರ್ಕಾರದಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ನಡೆಯುತ್ತಿದೆ. ಆಸ್ಪತ್ರೆಯ ಔಷಧಿ ಖರೀದಿಯಲ್ಲಿ ಭ್ರಷ್ಟಾಚಾರ ಇದೆ. ಆಡಳಿತ ಹಾಗೂ ವರ್ಗಾವಣೆ ದಂಧೆಯಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ಹೆಚ್ಚಾಗಿದೆ.

# ಚೇಗುಂಟಾ ಪಾರ್ವತಿ ಪರಮೇಶ್ವರ ದೇವಸ್ಥಾನದ ಜಾತ್ರೆ : ಅದ್ದೂರಿ ಉಚ್ಚಾಯ ಮಹೋತ್ಸವ

**ರಾಯಚೂರು,ಏ.1**-ತೆಲಂಗಾಣ ರಾಜ್ಯದ ಚೇಗುಂಟಾದ ಶ್ರೀ ಪಾರ್ವತಿ ಪರಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವವು ಸಂಭ್ರಮದಿಂದ ನಡೆಯಿತು.

ಉಚ್ಚಾಯ ಮಹೋತ್ಸವಕ್ಕೆ ಕ್ಷೀರಲಿಂಗ ಸ್ವಾಮೀಜಿಗಳು ಹಾಗೂ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ ಅವರು ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಪಾರ್ವತಿ ಪರಮೇಶ್ವರ ದೇವರ ಆಶೀರ್ವಾದ ಪಡೆದುಕೊಂಡು ಉಚ್ಚಾಯ ಹಾಗೂ ಶ್ರೀಗಳ ದರ್ಶನವನ್ನು ಶಾಸಕರು ಹಾಗೂ ಮುಖಂಡರು ಪಡೆದರು.

ಈ ಸಂದರ್ಭದಲ್ಲಿ ಊರಿನ ಗೌಡರು ಹಿರಿಯರು ಹಿರಿಯ ಮುಖಂಡರು. ಕಾಂಗ್ರೆಸ್ ಮಹಿಳಾ ಘಟಕದ ಹಿರಿಯ ಮುಖಂಡರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರಾದ ಶಶಿಕಲಾ ಭೀಮರಾಯ, ಮುಖಂಡರಾದ ಹಂಪನಗೌಡ ಪೊಲೀಸ್ ಪಾಟೀಲ್, ಶಂಕರ್ ಪಾಟೀಲ್, ಬಸವರಾಜ್ ವಕೀಲರು. ಖಾಜಾ ಶಕ್ತಿನಗರ. ಅಂಬಯ್ಯ ನಾಗಪ್ಪ ಯದ್ಲಾಪುರ, ಕೆ ಶರಣಪ್ಪ .ಚೋಟು .ಸೂಗೂರಲಿಂಗಪ್ಪ .ನರಸರೆಡ್ಡಿ ಇನ್ನೂ ನೂರಾರು ಜನ ಭಕ್ತಾದಿಗಳು ಭಾಗವಹಿಸಿ ದೇವರ ಕೃಪೆಗೆ ಪಾತ್ರರಾದರು.

## ಮಂಗಳೂರು: ಮೀನು ಹಿಡಿಯಲು ಹೋದಾಗ ಮಗುಚಿದ ದೋಣಿ, ಇಬ್ಬರು ಸಾವು, ಇನ್ನೋರ್ವ ಪಾರು

**ಮಂಗಳೂರು,ಏ.1**-ಮೀನು ಹಿಡಿಯಲು ಫಲ್ಗುಣಿ ನದಿಗೆ ಸಣ್ಣ ದೋಣಿಯಲ್ಲಿ ತೆರಳಿದ್ದ ಮೂವರು ಯುವಕರಲ್ಲಿ ಇಬ್ಬರು ನೀರುಪಾಲಾಗಿ ಸಾವನ್ನಪ್ಪಿದ ಘಟನೆ ಕಾವೂರಿನ ಕುಂಜತ್ ಬೈಲಿನಲ್ಲಿ ಇಂದು ನಡೆದಿದೆ. ಕುಂಜತ್‌ಬೈಲ್ ನಿವಾಸಿಗಳಾದ ಗಣೇಶ (28) ಹಾಗೂ ರಾಯಲ್ (27) ಸಾವನ್ನಪ್ಪಿದ್ದಾರೆ.

ನಸುಕಿನ ವೇಳೆ ಸುಮಾರು 1:30ಕ್ಕೆ ಮೀನು ಹಿಡಿಯಲೆಂದು ಮೂವರು ಸಣ್ಣ ದೋಣಿಯಲ್ಲಿ ತೆರಳಿದ್ದರು. ನದಿ ಮಧ್ಯದಲ್ಲಿದ್ದಾಗ ದೋಣಿ ಮಗುಚಿದೆ. ಈಜು ಬಾರದ ಗಣೇಶ್ ಹಾಗೂ ರಾಯಲ್ ಮುಳುಗಿ ಮೃತಪಟ್ಟರೆ, ನಿತೇಶ್ (29) ಈಜಿ ದಡ ಸೇರಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಸ್ಥಳೀಯ ಮುಳುಗು ತಜ್ಞರು ಗಣೇಶ್ ಅವರ ಮೃತದೇಹವನ್ನು ಹೊರತೆಗೆದಿದ್ದಾರೆ. ರಾಯಲ್ ಎಂಬವರ ಪತ್ತೆಗೆ ಶೋಧ ನಡೆಯುತ್ತಿದೆ.

ಪ್ರತ್ಯೇಕ ಘಟನೆ: ರಸ್ತೆ ದಾಟುತ್ತಿದ್ದ ಮಹಿಳೆಗೆ ವೇಗವಾಗಿ ಬಂದ ಕಾರು ಡಿಕ್ಕಿಯಾಗಿ ಆಕೆ ದೂರಕ್ಕೆ ಹಾರಿಬಿದ್ದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಸಜಿಪಮುನ್ನೂರು ದಾಸರಗುಡ್ಡೆ ಎಂಬಲ್ಲಿ ನಡೆದಿದೆ. ಉಳ್ಳಾಲದ ಬೋಳಿಯಾರ್ ನಿವಾಸಿ ಭಾರತಿ (48) ಗಂಭೀರವಾಗಿ ಗಾಯಗೊಂಡಿದ್ದಾರೆ.

ಭಾರತಿ ಹಾಗೂ ಪುತ್ರಿ ದೀಪಶ್ರೀ ಅವರು ದಾಸರಗುಡ್ಡೆ ಎಂಬಲ್ಲಿನ ಗುಳಿಗಜ್ಜನ ಕಟ್ಟೆಗೆ ಕಾಣಿಕೆ ಹಾಕಲು ರಸ್ತೆ ದಾಟುತ್ತಿದ್ದರು.

## ...ಮೊದಲನೇ ಪುಟದಿಂದ

### ರಾಯಚೂರು ವಿಧಾನಸಭಾ ಕ್ಷೇತ್ರದಲ್ಲೂ ಮುಸ್ಲಿಂರಿಗೆ ಟಿಕೇಟ್ ತಪ್ಪಿಸುವ ಹುನ್ನಾರ-ಬಷೀರುದ್ದೀನ್ ಆರೋಪರ

ರಾಯಚೂರು ವಿಧಾನಸಭಾ ಕ್ಷೇತ್ರದಲ್ಲಿಯೂ ಮುಸ್ಲಿಂ ಸಮೂದಾಯಕ್ಕೆ ಅನ್ಯಾಯವಾಗಬಾರದು. ನಾನು ರಾಯಚೂರು ವಿಧಾನಸಭಾ ಕ್ಷೇತ್ರದ ಸ್ವರ್ಧಾಂಕ್ಷಿಯಾಗಿದ್ದೇನೆ. ಕಳೆದ ಬಾರಿ ವಿಧಾನಸಭಾ ಚುನಾವಣೆಯಲ್ಲಿ ನಾನು ಪ್ರಬಲ ಆಕಾಂಕ್ಷಿಯಾಗಿದ್ದೆ. ನಾಮಪತ್ರ ಸಲ್ಲಿಸುವ ಕೊನೆದಿನದಂದು ಎಐಸಿಸಿ ಕಾರ್ಯದರ್ಶಿ ಸುರ್ಜೆವಾಲ್ ಇವರಿಗೆ ತಿಳಿಸಿ ಹೆಸರು ಅಂತಿಮಗೊಳಿಸಲಾಗಿತ್ತು. ಆದರೆ ರವಿ ಬೋಸರಾಜ ಇವರು ಸಂಜೆ ಸುರ್ಜೆವಾಲ ಇವರು ಬಷೀರ್ ಅಹ್ಮದರಿಗೆ ಟಿಕೇಟ್ ನೀಡುವದು ಬೇಡ ಎನ್ನುತ್ತಿದ್ದಾರೆ ಎಂದು ಹೇಳಿದರು. ಅಲ್ಲದೇ ಕಲ್ಬುರ್ಗಿಯ ಪ್ರಿಯಾಂಕ ಖರ್ಗೆಯವರು ಬಷೀರ್ ಅಹ್ಮದ್‌ಗೆ ಟಿಕೇಟ್ ನೀಡಬಾರದು ಎಂದು ಹೇಳಿದ್ದಾರೆ ಎಂದು ಮೊಬೈಲ್ ಸ್ಪೀಕರ್‌ನಲ್ಲಿ ಕೇಳಿಸಿದರು. ಮಧ್ಯರಾತ್ರಿವರೆಗೆ ಚರ್ಚೆ ನಡೆದು ಕೊನೆಗೆ ನಾನೇ ಟಕೇಟ್ ಬಿಟ್ಟುಕೊಟ್ಟು ಮಹ್ಮದ ಶಾಲಂ ಇವರಿಗೆ ಟಿಕೇಟ್ ನೀಡಲು ಹೇಳಿದೆ. ಮುಸ್ಲಿಂ ಸಮೂದಾಯಕ್ಕೆ ಟಿಕೇಟ್ ಕಳೆದುಕೊಳ್ಳುವದನ್ನು ತಪ್ಪಿಸಲು ನೋವು ನುಂಗಿ ಪಕ್ಷದ ಅಬ್ಯರ್ಥಿ ಗೆಲುವಿಗೆ ಶ್ರಮಿಸಿದೆ. ಆದರೆ ರವಿ ಬೋಸರಾಜ ಇವರು ಹಿಟ್ಲರನಂತೆ ವರ್ತಿಸಿ ಉದ್ದೇಶ ಪೂರಕವಾಗಿಯೇ ಮಹ್ಮದ ಶಾಲಂರನ್ನು ಸೋಲಿಸಲು ಕಾರಣರಾದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಕೇವಲ ಮುಸ್ಲಿಂ ಏರಿಯಾಗಳಿಗೆ ಸೀಮಿತಗೊಳಿಸಿ ಬೇರೆ ಸಮೂದಾಯ ಬಡವಾಣೆಗಳಿಗೆ ಪ್ರಚಾರಕ್ಕೆ ಹೋಗದಂತೆ ತಡೆಯಲಾಯಿತು. ಮಹ್ಮದ ಶಾಲಂ ಕೇವಲ ಮುಸ್ಲಿಂ ಸಮೂದಾಯ ಅಭ್ಯರ್ಥಿಯಾಗಿರಲಿಲ್ಲ. ಎಲ್ಲ ಸಮೂದಾಯದವರಿಗೂ ಪಕ್ಷದ ಅಬ್ಯರ್ಥಿ ಪರಿಚಯಿಸಬೆಕಿತ್ತು. ಆಗಲೇ ಇಲ್ಲ.ಪಕ್ಷ ನಾಯಕರುಗಳೇ ಮಹ್ಮದ ಶಾಲಂ ಪರವಾಗಿ ಕೆಲಸ ಮಾಡಲಿಲ್ಲ. ಈ ಕುರಿತು ರವಿ ಬೋಸರಾಜ ಇವರಿಗೆ ತಿಳಿಪಡಿಸುವ ಕೆಲಸ ಮಾಡಲೇ ಇಲ್ಲ. ಕಾಂಗ್ರೆಸ್ ನಾಯಕರಾದ ವೇಣು ಗೋಪಾಲ ಇವರು ಪಕ್ಷದ ಅಭ್ಯರ್ಥಿ ಮಹ್ಮದ ಶಾಲಂ ಮೂರು ಸಾವಿರ ಮತಗಳಿಂದ ಸೋತಿದ್ದಾರೆ ಎಂದು ರವಿ ಬೋಸರಾಜ ಹೇಳಿದಾಗ ನೀನೇ ಸೋಲಿಸಿ ಮುಂದಿನ ಚುನಾವಣೆಗೆ ಸಿದ್ದತೆ ಮಾಡಿಕೊಂಡಿದ್ದಿಯಾ ಎಂದರಂತೆ. ರವಿ ಬೋಸರಾಜ ಪಕ್ಷದ ಅಭ್ಯರ್ಥಿ ಸೋಲಿಗೆ ಜಾಣ ನಡೆ ಪ್ರದರ್ಶಿಸಿದ್ದಾರೆ. ಮುಸ್ಲಿಂ ಪರ ಎಂದು ಹೇಳಿಕೊಳ್ಳುವ ರವಿ ಬೋಸರಾಜ ಇವರು ಕೇವಲ ಮುಸ್ಲಿಂ ಸಮೂದಾಯಕ್ಕಷ್ಟೇ ಅಲ್ಲ. ಮುಸ್ಲಿಂ ಸಮೂದಾಯ ಅಧಿಕಾರಿಗಳನ್ನೂ ಸಹ ಕೆಲಸ ಮಾಡಲು ಬಿಟ್ಟಿಲ್ಲ. ಕಳೆದ ಲೋಕಸಭಾ ಚುನಾವಣೆಯಲ್ಲಿ ಚುನಾವಣೆ ಹಿನ್ನಲೆಯಲ್ಲಿ ವರ್ಗವಾಗಿ ಬಂದಿದ್ದ ರೋಷನ್ ಜಮೀರ್ ಎಂಬುವವರಿಗೆ ಕೆಲಸ ಮಾಡುವ ಅವಕಾಶವೇ ನೀಡದೇ ಹಿಂದಕ್ಕೆ ಕಳುಹಿಸಲಾಯಿತು. ಎನ್.ಎಸ್.ಬೋಸರಾಜ ಗಮನಕ್ಕೂ ತಂದರೂ ರವಿಬೋಸರಾಜ ಇವರೇ ಮೂರು ತಿಂಗಳು ಮಾತ್ರ ಕೆಲಸ ಮಾಡಲು ಅವಕಾಶ ನೀಡಲಿಲ್ಲ. ಮಾನವಿಯ ಆಲ್ದಾಳ ವೀರಭದ್ರ ಎಂಬಾತ ನೂರು ಎಕರೆ ವಕ್ಫ ಆಸ್ತಿ ಕಬಳಿಸಿದ್ದರೂ ವಕ್ಫ ಬೋರ್ಡಗೆ ಡಮ್ಮಿ ಅಧ್ಯಕ್ಷರನ್ನಾಗಿ ಸಿಕೊಂಡು ರಕ್ಷಣೆ ಮಾಡುತ್ತಿದ್ದಾರೆ. ಮೇಲ್ನೋಟಕ್ಕೆ ಮುಸ್ಲಿಂ ಪರವೆಂದು ಪೋಜು ನೀಡಿ ಪ್ರಚಾರ ಪಡೆಯುವವರು ಮುಸ್ಲಿಂರಿಗೆ ಮಾಡಿದ್ದೇನು ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದರೂ ಮುಸ್ಲಿಂ ಕಾರ್ಯಕರ್ತರನ್ನು ಯಾವ ಸಮಿತಿಗೆ ನೇಮಿಸಿದ್ದಾರೆ ಎಂದು ಹೇಳಲಿ. ಯುಗಾದಿ ಮತ್ತು ರಂಜಾನ ಹಬ್ಬ ಆಚರಣೆ ಸಂದರ್ಬದಲ್ಲಿ ಹಿಂದೂಗಳಿಗೆ ಯಾವುದೇ ಕಿಟ್ ನೀಡದೇ ಮುಸ್ಲಿಂರಿಗೆ ಮಾತ್ರ ಕಿಟ್ ಹಂಚಿಕೆ ಮಾಡಿರುವದು ಚುನಾವಣೆ ಉದ್ದೇಶವೇ ಆಗಿದೆ. ಹಿಂದೂ ಮತ್ತು ಮುಸ್ಲಿಂ ಸಮೂದಾಯರು ಒಂದೇಡೆ ವಾಸ ಮಾಡುವಾಗ ಯುಗಾದಿ ಹಬ್ಬಕ್ಕೆ ಹಂಚದ ಕಿಟ್‌ಗಳು ರಂಜಾನ್ ಮಾತ್ರ ಹಂಚಕೆ ಮಾಡಿರುವದು ಚುನಾವಣೆ ಉದ್ದೇಶವೇ ಹೊರತು ಬೇರೆನೂ ಅಲ್ಲ. ಹಿಂದೂಗಳಿಲ್ಲಿ ಬಡವರ ಇಲ್ಲವೇ. ಸಮಾಜಗಳಲ್ಲಿ ತಪ್ಪು ಆಭಿಪ್ರಾಯ ಮೂಡಿಸುತ್ತಿದ್ದಾರೆ. ಅವರಿಗೆ ನಿಜವಾಗಿ ಕಾಳಜಿಸಿದ್ದರೆರ ಮುಂದಿನ 2028 ವಿಧಾನಸಭಾ ಚುನಾವಣೆಯಲ್ಲಿ ಮುಸ್ಲಿಂ ಅಭ್ಯರ್ಥಿಗೆ ಪಕ್ಷದಿಂದ ಟಕೇಟ್ ಕೊಡಿಸುವದಾಗಿ ಘೋಷಿಸುವದಾಗಿ ಪ್ರಮಾಣ ಮಾಡಿಹೇಳಲಿ, ನನಗೆ ಟಿಕಿಟೇ ಬೇಕಿಲ್ಲ ಎಂದು ಸ್ವಷ್ಟಪಡಿಸಲಿ ಎಂದು ಸವಾಲು ಹಾಕಿದರು. ರವಿ ಬೋಸರಾಜ ದೊಂಬರಾಟ ಮಾಡುವದನ್ನು ನಿಲ್ಲಿಸಬೇಕು. ಹಿಟ್ಲರನಂತೆ ವರ್ತಿಸಬಾರದು ಎಂದರು. ಸಚಿವ ಜಮೀರ್ ಅಹ್ಮದ್ ಅವರೇ ಹೇಳಿರುವಂತೆ ನನಗೆ ಟಿಕೇಟ್ ತಪ್ಪಿಸಲು ರವಿ ಬೋಸರಾಜರೇ ಕಾರಣ ಎಂದು ಹೇಳಿದ್ದು ಚರ್ಚೆಗೆ ಸಿದ್ದವಿದ್ದೇನೆ. ಅಹಿಂದ ಎಂದು ಹೇಳಿ ಹಿಂದುಳಿದ ಸಮೂದಾಯಗಳಿಗೂ ದಾರಿತಪ್ಪಿಸುತ್ತಿದ್ದಾರೆ. ಮುಸ್ಲಿಂ ಸಮುದಾಯ ಮನ್ನಣೆ ನಿಡುವದಾಗಿ ಹೇಳುತ್ತಲೇ ಟಿಕೇಟ್ ತಪ್ಪಿಸುವ ಹುನ್ನಾರ ನಡೆಸುತ್ತಿದ್ದಾರೆ. ಮಹ್ಮದ ಶಾಲಂ ಸೇರಿದಂತೆ ಸಮಾಜ ಕೆಲವರು ಅನಿವಾರ್ಯವಾಗಿ ಅವರನ್ನೇ ಅವಲಂಬಿಸಬೇಕಿದೆ. ಅವರನ್ನು ವಂಚಿಸುವ ದಿನಗಳು ದೂರವಿಲ್ಲ. ಕಾಂಗ್ರೆಸ್ ಪಕ್ಷದಲ್ಲಿರುವ ಗುಂಪುಗಾರಿಕೆಯಿಂದ ಪಕ್ಷ ಮತ್ತಷ್ಟು ಕುಸಿದು ಹೋಗುವ ಮುನ್ನ ಪಕ್ಷ ವರಿಷ್ಟರು ಗಮನಹರಿಸಬೇಕಿದೆ. ಜನಸಂಖ್ಯೆ ಆಧಾರದ ಮೇಲೆ ಮುಸ್ಲಿಂ ಸಮುದಾಯಕ್ಕೆ ನ್ಯಾಯ ಒದಗಿಸಬೇಕು. ಇಲ್ಲದೇ ಹೋದರೆ ಸಮೂದಾಯ ಕಾಂಗ್ರೆಸ್ ಪಕ್ಷದ ಮೇಲಿನ ನಂಬಿಕೆ ಕುಸಿತವಾಗಲು ಕಾರಣವಾಗುತ್ತದೆ. ರಾಜ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವುಕುಮಾರ ಸಹ ಯೋಚಿಸಬೇಕಿದೆ. ರಾಜಕೀಯ ಕುತಂತ್ರದಿಂದ ಸಮೂದಾಯಕ್ಕೆ ಅನ್ಯಾಯವಾದರೆ ಸಮೂದಾಯ ಜನರು ಪಕ್ಷವನ್ನು ಬೆಂಬಲಿಸಬೇಕೋ ಬೇಡವೋ ಎನ್ನುವದನ್ನು ಯೋಚಿಸುತ್ತಾರೆ ಎಂದು ಎಚ್ಚರಿಸಿದರು.

### ಹಾವೇರಿ: ಪ್ಲಾಟ್‌ಫಾರ್ಮ್‌ಗೆ ನುಗ್ಗಿ ಜನರಿಗೆ ಬಸ್ ಡಿಕ್ಕಿ : ಮಗು ಸಾವು, ಮೂವರಿಗೆ ಗಾಯ

ಘಟನೆ ನಡೆದಿದ್ದು ಹೀಗೆ: ಎಂದಿನಂತೆ ನಿಲ್ದಾಣದಲ್ಲಿ ಜನರು ಬಸ್‌ಗಳಿಗಾಗಿ ಕಾಯುತ್ತಿದ್ದರು. ಈ ವೇಳೆ, ಹಾವೇರಿ-ಲಕ್ಷ್ಮೇಶ್ವರ ಬಸ್ ಬಂದಿದ್ದು, ಅಪಘಾತವಾಗುವ ಅರಿವಿಲ್ಲದ ಜನರು ಪ್ಲಾಟ್‌ಫಾರ್ಮ್ ಮೇಲ್ ನಿಂತು ಬಸ್ ಬೋರ್ಡ್ ನೋಡುತ್ತಿದ್ದರು. ಆದರೆ ವೇಗವಾಗಿ ಬಂದ ಬಸ್, ನಿಲುಗಡೆಯಾಗದೆ ಪ್ಲಾಟ್‌ಫಾರ್ಮ್ ಮೇಲೆ ನುಗ್ಗಿದೆ. ಇದರಿಂದ ಅಲ್ಲಿದ್ದ ಜನರು ಬಸ್ ಎದುರುಗಡೆ ಸಿಲುಕಿದ್ದಾರೆ. ಘಟನೆಯ ಭಯಾನಕ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಘಟನೆಗೆ ಚಾಲಕನ ನಿರ್ಲಕ್ಷ್ಯ ಹಾಗೂ ವೇಗದ ಚಾಲನೆ ಕಾರಣವೇ? ಇಲ್ಲವೇ ಬಸ್‌ನ ತಾಂತ್ರಿಕ ಸಮಸ್ಯೆಯಿಂದ ಸಂಭವಿಸಿದೆಯೇ? ಎಂಬುದು ತನಿಖೆಯಿಂದ ತಿಳಿದು ಬರಬೇಕಿದೆ. ಬಸ್ ಮುಂಭಾಗ ಜಖಂಗೊಂಡಿದೆ. ಅವಘಡದಿಂದ ಬಸ್ ನಿಲ್ದಾಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಹಾವೇರಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪೊಲೀಸ್ ವಾಹನ ಚಾಲಕ ಸಾವು: ಬೈಕ್‌ಗೆ ಖಾಸಗಿ ಬಸ್ ಡಿಕ್ಕಿ ಹೊಡೆದು, ಪೊಲೀಸ್ ವಾಹನ ಚಾಲಕ ಸ್ಥಳದಲ್ಲೇ ಮೃತಪಟ್ಟ ಘಟನೆ ಬುಧವಾರ ಬೆಳಗ್ಗೆ ಚಿಕ್ಕಬಳ್ಳಾಪುರದ ಶಿಡ್ಲಘಟ್ಟ ರಸ್ತೆಯ ಬಜಾಜ್ ಶೋರೂಂ ಬಳಿ ಸಂಭವಿಸಿತ್ತು. ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆ ವಾಹನ ಚಾಲಕ ಗುಂದಿಕೆರೆ ಗ್ರಾಮದ ಶ್ರೀನಿವಾಸ್ (55) ಮೃತಪಟ್ಟವರು. ಸುಮಾರು 16 ವರ್ಷಗಳ ಕಾಲ ಸೇನೆಯಲ್ಲಿ ಸೇವೆ ಸಲ್ಲಿಸಿದ ಬಳಿಕ ಸ್ವಯಂ ನಿವೃತ್ತಿ ಪಡೆದಿದ್ದ ಅವರು ಕಳೆದ 5 ವರ್ಷಗಳಿಂದ ಚಿಂತಾಮಣಿ ಗ್ರಾಮಾಂತರ ಠಾಣೆಯಲ್ಲಿ ಇನ್ಸ್‌ಪೆಕ್ಟರ್ ಜೀಪ್ ಚಾಲಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ಶ್ರೀನಿವಾಸ್ ಬೆಳಗ್ಗೆ ತಮ್ಮ ತೋಟದಲ್ಲಿ ಕೆಲಸ ಮುಗಿಸಿ ಬೈಕ್‌ನಲ್ಲಿ ಕರ್ತವ್ಯಕ್ಕೆ ತೆರಳುತ್ತಿದ್ದರು. ಈ ವೇಳೆ ಚಿಂತಾಮಣಿ ನಗರದ ಶಿಡ್ಲಘಟ್ಟ ರಸ್ತೆಯ ಚೆಮನೂರು ಜುವೆಲ್ಲರ್ಸ್ ಮುಂಭಾಗ ಖಾಸಗಿ ಬಸ್ ಡಿಕ್ಕಿ ಹೊಡೆದು ದುರ್ಘಟನೆ ನಡೆದಿತ್ತು.

## ಮತದಾನದ ಹಕ್ಕನ್ನು ರದ್ದು ಮಾಡಲು ಸಾಧ್ಯವಿಲ್ಲ: ಸುಪ್ರೀಂ ಕೋರ್ಟ್

ಹಕ್ಕುಗಳನ್ನು ಶಾಶ್ವತವಾಗಿ ಅಳಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿಪುಲ್ ಪಂಚೋಲಿ ಅವರನ್ನೊಳಗೊಂಡ ಪೀಠದ ಮುಂದೆ ಪಶ್ಚಿಮ ಬಂಗಾಳದಲ್ಲಿ ನಡೆದ ಖಐಖ ವಿಷಯವು ವಿಚಾರಣೆಗೆ ಬಂದಿತು. ಅರ್ಜಿದಾರರ ಪರವಾಗಿ ಹಿರಿಯ ವಕೀಲರಾದ ಕಪಿಲ್ ಸಿಬಲ್, ಶ್ಯಾಮ್ ದಿವಾನ್, ಮೇನಕಾ ಗುರುಸ್ವಾಮಿ, ಗೋಪಾಲ್ ಶಂಕರನಾರಾಯಣನ್ ಮತ್ತು ಕಲ್ಯಾಣ್ ಬ್ಯಾನರ್ಜಿ ವಾದ ಮಂಡಿಸಿದರು. ಹಿರಿಯ ವಕೀಲರಾದ ದಾಮ ಶೇಷಾದ್ರಿ, ನಾಯ್ಡು ಭಾರತ ಚುನಾವಣಾ ಆಯೋಗದ ಪರವಾಗಿ ವಾದ ಮಂಡಿಸಿದರು.ವಿಚಾರಣೆಯ ಸಮಯದಲ್ಲಿ ಒಬ್ಬ ವ್ಯಕ್ತಿಯು ಮೇಲ್ಮನವಿ ಸಲ್ಲಿಸಿದಾಗಲೆಲ್ಲಾ ಅದಕ್ಕೆ ಕಾರಣವನ್ನು ಒದಗಿಸಬಹುದು ಎಂದು ನ್ಯಾಯಮೂರ್ತಿ ಬಾಗ್ಚಿ ಹೇಳಿದರು. ಹಿರಿಯ ವಕೀಲರಾದ ಸಿಬಲ್ ನ್ಯಾಯಾಲಯದ ಅಭಿಪ್ರಾಯವನ್ನು ಒಪ್ಪಿಕೊಂಡರು. ತಮ್ಮ ಕಕ್ಷಿದಾರರು ಸಂಪೂರ್ಣ ದಾಖಲೆಯನ್ನು ಮೇಲ್ಮನವಿ ಪ್ರಾಧಿಕಾರದ ಮುಂದೆ ಇಡುತ್ತಾರೆ ಎಂದು ಆಯೋಗದ ಪರ ವಕೀಲರು ಹೇಳಿದರು.ಅಲ್ಲದೇ, ಮೇಲ್ಮನವಿ ಪ್ರಾಧಿಕಾರವು ಅದನ್ನು ಬಾಧಿತ ವ್ಯಕ್ತಿಯೊಂದಿಗೆ ಮತ್ತು ಭಾಗವಹಿಸುತ್ತಿರುವ ಯಾರೊಂದಿಗೂ ಹಂಚಿಕೊಳ್ಳುವ ಹಕ್ಕನ್ನು ಹೊಂದಿರುತ್ತದೆ. ದಾಖಲೆಯ ನೈಜತೆ, ದೃಢೀಕರಣ ಅಥವಾ ಸಿಂಧುತ್ವದ ಬಗ್ಗೆ ವಿವಾದವಿರುವಲ್ಲೆಲ್ಲಾ, ನ್ಯಾಯಮಂಡಳಿಯು ಅದನ್ನು ಅಧಿಕೃತ ದಾಖಲೆಯಿಂದ ಪರಿಶೀಲಿಸಲಿ. ಅವರು ಈ ದಾಖಲೆಗಳ ನೈಜತೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಪೀಠ ಹೇಳಿದೆ.

ಅರ್ಜಿದಾರರು ಪೂರೈಸುವ ದಾಖಲೆಗಳನ್ನು ಪರಿಗಣಿಸಲು ನ್ಯಾಯಮಂಡಳಿ ಪ್ರಾಧಿಕಾರಕ್ಕೆ ನಿರ್ದೇಶಿಸುವಂತೆ ವಕೀಲರೊಬ್ಬರು ಪೀಠವನ್ನು ಒತ್ತಾಯಿಸಿದರು. ಇದಕ್ಕೆ ಸ್ಪಷ್ಟೀಕರಣದ ಅಗತ್ಯವಿದೆ ಎಂದು ಒತ್ತಿ ಹೇಳಿದರು. ಇಲ್ಲದಿದ್ದರೆ ಮೇಲ್ಮನವಿ ನ್ಯಾಯಮಂಡಳಿ ಇಲ್ಲದ ದಾಖಲೆಗಳನ್ನು ಪರಿಗಣಿಸುತ್ತದೆ ಎಂದು ಅವರು ಪೀಠದ ಗಮನಕ್ಕೆ ತಂದರು. ನ್ಯಾಯಮೂರ್ತಿ ಬಾಗ್ಚಿ ಇದಕ್ಕೆ ಪ್ರತಿಕ್ರಿಯಿಸಿ, ಅನ್ಯಾಯಕ್ಕೊಳಗಾದ ವ್ಯಕ್ತಿಯಿಂದ ಮೇಲ್ಮನವಿ ಸಲ್ಲಿಸಿದಾಗಲೆಲ್ಲಾ - ಸೇರ್ಪಡೆ ಅಸಮರ್ಥನೀಯ ಎಂದು ಭಾವಿಸುವ ಆಯೋಗದ ಪ್ರತಿನಿಧಿಯಾಗಿರಲಿ ಅಥವಾ ಹೊರಗಿಡಲ್ಪಟ್ಟ ವ್ಯಕ್ತಿಯಾಗಿರಲಿ - ಸಂಬಂಧಪಟ್ಟ ವ್ಯಕ್ತಿಗೆ ಕಾರಣವನ್ನು ಒದಗಿಸಲಾಗುತ್ತದೆ ಎಂದು ನ್ಯಾಯಮೂರ್ತಿ ಬಾಗ್ಚಿ ಹೇಳಿದರು. ನ್ಯಾಯಮಂಡಳಿಯು ಸೂಕ್ತ ಮತ್ತು ಸೂಕ್ತವೆಂದು ಭಾವಿಸುವ ವಿಷಯಕ್ಕೆ ಒಳಪಟ್ಟು, ಅವರು ಕಾರಣಗಳನ್ನು ನಿರಾಕರಿಸುವ ವಿಧಾನವನ್ನು ಸಂಬಂಧಪಟ್ಟ ವ್ಯಕ್ತಿಯು ಹೊಂದಿರುತ್ತಾರೆ ಎಂದೂ ಅವರು ಹೇಳಿದರು.ನ್ಯಾಯಪೀಠವು ಎರಡು ವಿಭಿನ್ನ ಮತ್ತು ಸ್ವತಂತ್ರ ತಾಲಿಮುಗಳನ್ನು ನೋಡುತ್ತಿದೆ ಎಂದು ಚುನಾವಣಾ ಆಯೋಗದ ವಕೀಲರಿಗೆ ತಿಳಿಸಿತು.ಒಂದು ಚುನಾವಣೆ ನಡೆಯುವ ಪಟ್ಟಿ ಮತ್ತು ಇನ್ನೊಂದು ಮತದಾನದ ಪ್ರಮುಖ ಸಾಂವಿಧಾನಿಕ ಹಕ್ಕು.ಇಂದು ಒಬ್ಬ ವ್ಯಕ್ತಿಯನ್ನು ಮತದಾನದಿಂದ ಹೊರಗಿಡಲಾಗಿದ್ದು, ಈ ನಿರ್ದಿಷ್ಟ ಚುನಾವಣೆಯಲ್ಲಿ ಮತ ಚಲಾಯಿಸಲು ಸಾಧ್ಯವಾಗದಿದ್ದರೂ, ಮಾಜಿ ಮುಖ್ಯ ನ್ಯಾಯಮೂರ್ತಿ ನೇತೃತ್ವದ ನ್ಯಾಯಮಂಡಳಿಗೆ ಆ ಹೊರಗಿಡುವಿಕೆಯು ಅಸಮರ್ಥನೀಯ ಎಂದು ಕಂಡುಬಂದರೂ, ನಿರ್ಧಾರವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂಬುದಕ್ಕೆ ನಮಗೆ ಯಾವುದೇ ಕಾರಣ ಕಾಣುತ್ತಿಲ್ಲ ಮತ್ತು ಅವರು ಅದನ್ನು ಸುಧಾರಿಸುತ್ತಾರೆ

## ಕಪ್ಪು ಪಟ್ಟಿ ಧರಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಪ್ರತಿಭಟನೆ

ಬಿಂಬಿಸಲಾಗುತ್ತದೆ. ಕೆಲಸದ ಗಂಟೆಗಳಿಗೆ ಮಿತಿ ಇಲ್ಲದಂತೆ ಮಾಡುವುದಾಗಿದೆ. ಮುಷ್ಕರ ಹಕ್ಕು ಅಸಾಧ್ಯವಾಗುತ್ತದೆ. ಖಾಯಂ ಅವಧಿಯ ಉದ್ಯೋಗಗಳನ್ನು ಇಲ್ಲವಾಗಿಸುವುದಂತೆ ಮಾಡುವುದು ಇದರ ಉದ್ದೇಶವಾಗಿದೆ ಎಂದು ವಿರೋಧಿಸಿದರು.ಸಾಮಾಜಿಕ ಭದ್ರತಾ ವ್ಯವಸ್ಥೆಯನ್ನು ದುರ್ಬಲಗೊಳಿಸುವುದು. ಕನಿಷ್ಠ ವೇತನವನ್ನು ಬಡತನ ರೇಖೆಗಿಂತ ಕಡಿಮೆ ಮಟ್ಟದಲ್ಲಿ ನಿಗದಿ ಮಾಡುವುದು. ಖಾಯಂಯೇತರ ಕಾರ್ಮಿಕರಿಗೆ ಹಕ್ಕುಗಳೇ ಇಲ್ಲದಂತೆ ಮಾಡುವುದ ಇದರ ಉದ್ದೇಶವಾಗಿದೆ ಎಂದು ದೂರಿದರು. ಕಾರ್ಮಿಕರಿಗೆ ಸುರಕ್ಷತಾ ನಿಯಮಗಳನ್ನು ಕಡಿಮೆ ಮಾಡುವುದಾಗಿದೆ. ಈ ಎಲ್ಲಾ ಕಾರ್ಮಿಕ ವಿರೋಧಿ ಅಂಶಗಳನ್ನು ಕೇಂದ್ರ ಸರ್ಕಾರ ಜಾರಿ ಮಾಡುತ್ತಿದೆ. ಕೇಂದ್ರ ಸರಕಾರದ ಕಾರ್ಮಿಕ ಸಂಹಿತೆಗಳು ಭಾರತೀಯ ಸಂವಿಧಾನದ ಆತ್ಮಕ್ಕೂ, ಅಂತರರಾಷ್ಟ್ರೀಯ ಕಾರ್ಮಿಕ ಮಾನದಂಡಗಳಿಗೂ ಹಾಗೂ ಮಾನವ ಹಕ್ಕುಗಳಿಗೂ ವಿರುದ್ಧವಾಗಿವೆ ಎಂದು ದೂರಿದರು.

ಏ.1 ಇಂದು ಕಾರ್ಮಿಕರು ಕಪ್ಪುಬ್ಯಾಡ್ಜ್ ಧರಿಸುವ ಮುಖಾಂತರ ಕರಾಳ ದಿನಾಚರಣೆಯನ್ನು ಆಚರಿಸುವ ಮೂಲಕ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯ ನೇತೃತ್ವವನ್ನು ಮುಖಂಡರಾದ ಡಿ.ಎಸ್.ಶರಣಬಸವ. ಎನ್.ಎಸ್ ವೀರೇಶ್, ಅಜೀಜ್ ಜಹಾಂಗೀರ್ ದಾರ್.ಹೆಚ್. ಪದ್ಮಾ, ಗುರುರಾಜ ದೇಸಾಯಿ, ಮಹೇಶ್ ಚೀಕಲಪರ್ವಿ, ಗುರು ಮುಕ್ತಿ. ಸಂತೋಷ. ಕೆ.ಜಿ ವೀರೇಶ್.ಜಿಲಾನಿಪಾಷ, ಗೋಕುರಮ್ಮ. ರಾಘವೇಂದ್ರ, ಚನ್ನಬಸವ, ಶರಣು ಅರೋಲಿ,ತೋಟಯ್ಯ.ರಾಜಶೇಕರ್ ಸೇರಿದಂತೆ ಕಾರ್ಮಿಕರು ಭಾಗವಹಿಸಿದ್ದರು.

## ಜನಗಣತಿ: ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳಿಸಲು ಎಲ್ಲರ ಸಹಕಾರ ಅಗತ್ಯ -ಜೋಬಿನ್ ಮಹೋಪಾತ್ರ


ಕಡ್ಡಾಯವಾಗಿ ಬೇಕಾಗಿರುವ ಅಂಕಿ ಅಂಶಗಳಾಗಿವೆ. ಗಣತಿ ಎಂಬುವುದು ಈಗಿನ ಚಟುವಟಿಕೆಯಲ್ಲ. ಪ್ರಾಚೀನ ಕಾಲದ ವೇದಗಳಲ್ಲಿಯೂ ಗಣತಿಯ ಬಗ್ಗ ಉಲ್ಲೇಖವಿದೆ ಎಂದರು. ಗಣತಿಗಳು ಪ್ರತಿ ಹತ್ತು ವರ್ಷಗಳಿಗೊಮ್ಮೆ ಆಗುತ್ತದೆ. ಅದರಂತೆ 2011ರಲ್ಲಿ ಜನಗಣತಿಯಾಗಿತ್ತು. ನಂತರ 2021ರಲ್ಲಿ ಜನಗಣತಿಯಾಗಬೇಕಿತ್ತು. ಆದರೆ ಕೋವಿಡ್ ಸಂದರ್ಭವಿದ್ದರಿಂದ ಆಗಿರಲಿಲ್ಲ. ಇದೀಗ 15 ವರ್ಷಗಳ ನಂತರ ಜನಗಣತಿ ಆರಂಭವಾಗುತ್ತಿದ್ದು, ಪ್ರತಿಯೊಬ್ಬ ಗಣತಿದಾರರ ಮತ್ತು ಮೇಲ್ವಿಚಾರಕರೂ. ಶ್ರಮ ವಹಿಸಿ, ನಿಷ್ಠೆಯಿಂದ ಗಣತಿ ಕಾರ್ಯವನ್ನು ಮಾಡಬೇಕು ಎಂದರು.

ಇಂದಿನಿಂದ 45 ದಿನಗಳ ವರೆಗೆ ಮನೆ ಮನೆಗಳಿಗೆ ಗಣತಿದಾರರು ಹೋಗಿ ಕಟ್ಟಡಗಳು, ಕುಡಿಯುವ ನೀರಿನ ವ್ಯವಸ್ಥೆ, ರಸ್ತೆ, ಕುಟುಂಬಗಳ ಬದುಕಿನ ಅಂಶಗಳ ಮಾಹಿತಿಯನ್ನು ಸಂಗ್ರಹಿಸುತ್ತಾರೆ. ನಂತರ ಮಾಹಿತಿಗಳನ್ನು ಕ್ರೂಡಿಕರಿಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗುತ್ತದೆ. ಈ ವರದಿಯನ್ನು ಆದರಿಸಿ, ಜನರಿಗೆ ಉತ್ತಮ ಸೌಲಭ್ಯಗಳನ್ನು ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ದೇಶವು ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದೆ. ದೇಶದಲ್ಲಿ ಮೊದಲ ಬಾರಿಗೆ 1872ರಲ್ಲಿ ಜನಗಣತಿಯನ್ನು ಮಾಡಲಾಗಿತ್ತು. ಅದು ದಾಖಲೆಯ ಗಣತಿಯಾಗಿತ್ತು. ನಂತರ 1921ರಲ್ಲಿ ಮಾದರಿ ಗಣತಿಯಾಗಿದ್ದು, 2021ಕ್ಕೆ ಮಾದರಿ ಗಣತಿಯು 100 ವರ್ಷಗಳನ್ನು ಪೂರ್ಣಗೊಳಿಸಿದ್ದು, ಅದಾದ ನಂತರ ಇದೀಗ ಮತ್ತೆ ಜನಗಣತಿ ಆರಂಭವಾಗುತ್ತಿದೆ. ಈ ಬಾರಿಯ ಗಣತಿ ಡಿಜಿಟಲ್ ಆಗಿರುತ್ತದೆ ಎಂದು ತಿಳಿಸಿದರು.

ಗಣತಿ ಕಾರ್ಯ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಯಾರೂ ಕೂಡ ನಿರ್ಲಕ್ಷ್ಯ ವಹಿಸದೇ, ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಾಲಿಕೆಯ ಉಪ ಆಯುಕ್ತ ಶರಣಪ್ಪ ಸತ್ಯಂಪೇಟ್, ಸದಸ್ಯ ಕಾರ್ಯದರ್ಶಿ ಕೃಷ್ಣ ಶಾವಂತಗೇರ, ವಲಯ ಆಯುಕ್ತ ಮಲ್ಲಿಕಾರ್ಜುನ, ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಕಂದಾಯ ಅಧಿಕಾರಿಗಳಾದ ರವಿ.ಎಸ್.ಅಂಗಡಿ, ಶಂಶಾಲಂ ಸೇರಿದಂತೆ ಅನೇಕರಿದ್ದರು.




OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L